ಸತ್ಯ ಮತ್ತು ಧೈರ್ಯದ ಧ್ವನಿ

# ತುಂಗ ಬಿಂಬ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: 04 Vol: | ಸಂಚಿಕೆ: 78 Issue: | ರಾಯಚೂರು Raichur | 10-09-2026 | ಗುರುವಾರ Thursday | ಪುಟ : 04 Page: | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ | Editor: Gururaja K 98863 85685


## ರಾಯರ ಮಠದ ಹುಂಡಿಯಲ್ಲಿ ₹3.30 ಕೋಟಿ ಸಂಗ್ರಹ

ಮಂತ್ರಾಲಯ, ಸೆ.9: ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಹುಂಡಿಯನ್ನು ಬುಧವಾರ ತೆರೆಯಲಾಗಿದ್ದು, ಆಗಸ್ಟ್ ಹಾಗೂ ಸೆಪ್ಟೆಂಬರ್ ತಿಂಗಳ 16 ದಿನಗಳ ಅವಧಿಯಲ್ಲಿ ಒಟ್ಟು ₹3,30,69,139 ಸಂಗ್ರಹವಾಗಿದೆ ಎಂದು ಶ್ರೀಮಠದ ವ್ಯವಸ್ಥಾಪಕರು ಎಸ್ ಕೆ ಶ್ರೀನಿವಾಸರಾವ್ ತಿಳಿಸಿದ್ದಾರೆ.

ಹುಂಡಿ ಎಣಿಕೆಯಲ್ಲಿ ₹3,20,66,639 ನಗದು ನೋಟುಗಳು ಹಾಗೂ ₹10,02,500 ಮೌಲ್ಯದ ನಾಣ್ಯಗಳು ದೊರೆತಿವೆ. ಇದರೊಂದಿಗೆ ಒಟ್ಟು ಕಾಣಿಕೆ ಮೊತ್ತ ₹3.30 ಕೋಟಿಗೂ ಅಧಿಕವಾಗಿದೆ.

ಇದಲ್ಲದೆ, ಭಕ್ತರು ಕಾಣಿಕೆಯಾಗಿ ಸಲ್ಲಿಸಿದ 47 ಗ್ರಾಂ ಚಿನ್ನ ಹಾಗೂ 632 ಗ್ರಾಂ ಬೆಳ್ಳಿ ಹುಂಡಿಯಲ್ಲಿ ಪತ್ತೆಯಾಗಿದೆ. ಹುಂಡಿ



ಎಣಿಕೆ ಕಾರ್ಯ ಸಂಪೂರ್ಣಗೊಂಡಿದೆ ಎಂದು ಶ್ರೀಮಠದ ವ್ಯವಸ್ಥಾಪಕರು ಎಸ್ ಕೆ ಶ್ರೀನಿವಾಸರಾವ್ ಮಾಹಿತಿ ನೀಡಿದ್ದಾರೆ.

# 37 ವರ್ಷಗಳ ಬಳಿಕ ಕಾಲೇಜುಗಳಲ್ಲಿ ವಿದ್ಯಾರ್ಥಿ ಸಂಘ ಚುನಾವಣೆ ಮರುಜಾರಿ: ಸಚಿವ ಸಂಪುಟ ಒಪ್ಪಿಗೆ

ಬೆಂಗಳೂರು: ರಾಜ್ಯದ ಕಾಲೇಜು ಹಾಗೂ ವಿಶ್ವವಿದ್ಯಾಲಯಗಳಲ್ಲಿ ಕಳೆದ 37 ವರ್ಷಗಳಿಂದ ನಿಷೇಧದಲ್ಲಿದ್ದ ವಿದ್ಯಾರ್ಥಿ ಸಂಘಗಳ ಚುನಾವಣೆಯನ್ನು ಮರುಜಾರಿಗೊಳಿಸಲು ರಾಜ್ಯ ಸರ್ಕಾರ ನಿರ್ಧರಿಸಿದ್ದು, ಗುರುವಾರ ನಡೆದ ಸಚಿವ ಸಂಪುಟ ಸಭೆ ಇದಕ್ಕೆ ಅನುಮೋದನೆ ನೀಡಿದೆ.

ವಿಧಾನಸೌಧದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ಕುರಿತು ಮಹತ್ವದ ತೀರ್ಮಾನ ಕೈಗೊಳ್ಳಲಾಗಿದೆ. ವಿದ್ಯಾರ್ಥಿಗಳಲ್ಲಿ ನಾಯಕತ್ವ ಗುಣ, ಹೊಣೆಗಾರಿಕೆ, ಸಂಘಟನೆ ಸಾಮರ್ಥ್ಯ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಬೆಳೆಸುವ ಉದ್ದೇಶದಿಂದ ವಿದ್ಯಾರ್ಥಿ ಸಂಘಗಳ ಚುನಾವಣೆಯನ್ನು ಮತ್ತೆ ಆರಂಭಿಸಲು ಸರ್ಕಾರ ಮುಂದಾಗಿದೆ.

ಕಾಲೇಜು ಕ್ಯಾಂಪಸ್‌ಗಳಲ್ಲಿ ಹಿಂದೆ ಹಿಂಸಾಚಾರ, ಗೂಂಡಾಗಿರಿ ಹಾಗೂ ರಾಜಕೀಯ ಹಸ್ತಕ್ಷೇಪ ಹೆಚ್ಚಾಗಿದ್ದ ಹಿನ್ನೆಲೆಯಲ್ಲಿ 1989ರಲ್ಲಿ ಆಗಿನ ವೀರೇಂದ್ರ ಪಾಟೀಲ್ ನೇತೃತ್ವದ ಕಾಂಗ್ರೆಸ್ ಸರ್ಕಾರ ವಿದ್ಯಾರ್ಥಿ ಸಂಘಗಳ



ಚುನಾವಣೆಗೆ ನಿಷೇಧ ಹೇರಿತ್ತು. ಇದೀಗ ಸುಮಾರು 37 ವರ್ಷಗಳ ಬಳಿಕ ಆ ನಿಷೇಧವನ್ನು ತೆರವುಗೊಳಿಸಿ, ನಿಯಂತ್ರಿತ ರೂಪದಲ್ಲಿ ಚುನಾವಣೆ ನಡೆಸಲು ಸರ್ಕಾರ ತೀರ್ಮಾನಿಸಿದೆ.

ಹೊಸ ವ್ಯವಸ್ಥೆಯಡಿ ವಿದ್ಯಾರ್ಥಿ ಸಂಘದಲ್ಲಿ ಒಬ್ಬ ಅಧ್ಯಕ್ಷರನ್ನು ಆಯ್ಕೆ ಮಾಡಲಾಗುತ್ತದೆ. ಇಬ್ಬರು ಉಪಾಧ್ಯಕ್ಷರಿದ್ದು, ಅವರಲ್ಲಿ ಒಬ್ಬರು ಮಹಿಳೆಯಾಗಿರಬೇಕು. ಒಬ್ಬ ಕಾರ್ಯದರ್ಶಿ ಹಾಗೂ ಆರು ಜಂಟಿ ಕಾರ್ಯದರ್ಶಿಗಳನ್ನು ಆಯ್ಕೆ ಮಾಡಲಾಗುತ್ತದೆ. ಆರು ಜಂಟಿ ಕಾರ್ಯದರ್ಶಿಗಳಲ್ಲಿ ಇಬ್ಬರು ಮಹಿಳೆಯರಾಗಿರಲಿದ್ದಾರೆ.

ವಿದ್ಯಾರ್ಥಿ ಸಂಘದ ಚುನಾವಣೆಯಲ್ಲಿ ಯಾವುದೇ ಮೀಸಲಾತಿ ವ್ಯವಸ್ಥೆ ಇರುವುದಿಲ್ಲ. ಆದರೆ ಮಹಿಳಾ ಪ್ರತಿನಿಧಿತ್ವಕ್ಕೆ ಪ್ರತ್ಯೇಕ ಸ್ಥಾನಗಳನ್ನು ನಿಗದಿಪಡಿಸಲಾಗಿದೆ. ಯಾವುದೇ ಕಾಲೇಜಿನ ವಿದ್ಯಾರ್ಥಿಗಳು ಒಮ್ಮತದಿಂದ ಚುನಾವಣೆ ಬೇಡ ಎಂದು ಅಭಿಪ್ರಾಯಪಟ್ಟಲ್ಲಿ, ಅಲ್ಲಿ ಚುನಾವಣೆ ನಡೆಸಲಾಗುವುದಿಲ್ಲ ಎಂಬ ನಿಯಮವನ್ನೂ ರೂಪಿಸಲಾಗಿದೆ.

ಮುಖ್ಯವಾಗಿ, ಕಾಲೇಜು ಮತ್ತು ವಿಶ್ವವಿದ್ಯಾಲಯಗಳ ವಿದ್ಯಾರ್ಥಿ ಸಂಘ ಚುನಾವಣೆಗಳನ್ನು ನೇರ ಪಕ್ಷ ರಾಜಕಾರಣದಿಂದ ದೂರವಿಡಲು ಸರ್ಕಾರ ನಿರ್ಧರಿಸಿದೆ. ರಾಜಕೀಯ ಪಕ್ಷಗಳ ವಿದ್ಯಾರ್ಥಿ ಘಟಕಗಳು ಅಥವಾ ಇತರ ರಾಜಕೀಯ ಸಂಘಟನೆಗಳ ಹೆಸರಿನಲ್ಲಿ ಚುನಾವಣೆಯಲ್ಲಿ ಸ್ಪರ್ಧಿಸಲು ಅವಕಾಶ ಇರುವುದಿಲ್ಲ. ರಾಜಕೀಯ ಪಕ್ಷಗಳು ಹಾಗೂ ಸಂಘಟನೆಗಳ ಮುಖಂಡರು ಕಾಲೇಜು ಕ್ಯಾಂಪಸ್‌ಗೆ ತೆರಳಿ ಅಭ್ಯರ್ಥಿಗಳ ಪರ ಪ್ರಚಾರ ನಡೆಸುವುದಕ್ಕೂ ಅವಕಾಶ ನೀಡಲಾಗುವುದಿಲ್ಲ.

2026-27ನೇ ಶೈಕ್ಷಣಿಕ ಸಾಲಿನಿಂದಲೇ ಹೊಸ ವ್ಯವಸ್ಥೆಯನ್ನು ಜಾರಿಗೆ ತರಲು ಸರ್ಕಾರ ಉದ್ದೇಶಿಸಿದೆ. ವಿದ್ಯಾರ್ಥಿಗಳು ತಮ್ಮ ಕಾಲೇಜಿನ ಸಮಸ್ಯೆಗಳು, ಶೈಕ್ಷಣಿಕ ಸೌಲಭ್ಯಗಳು ಹಾಗೂ ವಿದ್ಯಾರ್ಥಿ ಹಿತಾಸಕ್ತಿಗಳ ಕುರಿತು ಧ್ವನಿ ಎತ್ತಲು ಮತ್ತು ಪ್ರಜಾಪ್ರಭುತ್ವದ ಪ್ರಕ್ರಿಯೆಯನ್ನು ವಿದ್ಯಾರ್ಥಿ ಹಂತದಲ್ಲಿಯೇ ಅನುಭವಿಸಲು ಈ ಚುನಾವಣೆ ವೇದಿಕೆಯಾಗಲಿದೆ ಎಂಬುದು ಸರ್ಕಾರದ ಆಶಯವಾಗಿದೆ.

ವಿದ್ಯಾರ್ಥಿ ರಾಜಕಾರಣವು ಕ್ಯಾಂಪಸ್‌ನ ಶೈಕ್ಷಣಿಕ ವಾತಾವರಣಕ್ಕೆ ಧಕ್ಕೆ ತರದಂತೆ ನಿಯಮಗಳನ್ನು ರೂಪಿಸುವುದರ ಜೊತೆಗೆ, ಚುನಾವಣೆ ಪ್ರಕ್ರಿಯೆ ಶಾಂತಿಯುತ ಮತ್ತು ಪಾರದರ್ಶಕವಾಗಿ ನಡೆಯುವಂತೆ ನೋಡಿಕೊಳ್ಳುವುದು ಸರ್ಕಾರದ ಮುಂದಿರುವ ಪ್ರಮುಖ ಸವಾಲಾಗಿದೆ.

## ಗಣೇಶ ವಿಸರ್ಜನೆಗೆ ಅಗತ್ಯ ಕ್ರಮವಹಿಸಿ: ಜಿಲ್ಲಾಧಿಕಾರಿ ಪೂವಿತಾ ಎಸ್

ರಾಯಚೂರು ಸೆಪ್ಟಂಬರ್ 09 (ಕರ್ನಾಟಕ ವಾರ್ತೆ): ಮುಂಬರುವ ಗಣೇಶ ಹಬ್ಬದ ಹಿನ್ನೆಲೆಯಲ್ಲಿ ರಾಯಚೂರು ಮಹಾನಗರ ಪಾಲಿಕೆ ವತಿಯಿಂದ ನಗರದ ವಿವಿಧೆಡೆ ನಿರ್ಮಿಸಲಾಗುತ್ತಿರುವ ಗಣೇಶ ವಿಸರ್ಜನೆ ಅಗತ್ಯ ಕ್ರಮವಹಿಸಬೇಕೆಂದು ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಸಂಬಧಿಸಿದ ಅಧಿಕಾರಿಗಳಿಗ ಸೂಚಿಸಿದರು.

ಸಪ್ಟೆಂಬರ್ 08ರ ಮಂಗಳವಾರ ದಂದು ನಗರದ ನೂತನ ಮಹಾನಗರ ಪಾಲಿಕೆಯ (ಹಳೆ ಜಿಲ್ಲಾಧಿಕಾರಿ) ಕಚೇರಿಯ ಸಭಾಂಗಣದಲ್ಲಿ ನಡೆದ ಗೌರಿ ಗಣೇಶ ಹಬ್ಬದ ಸಮನ್ವಯ ಪೂರ್ವ ಸಿದ್ಧತೆ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಕಾನೂನು ಮತ್ತು ಸುವ್ಯವಸ್ಥೆ ಮತ್ತು ಸಾರ್ವಜನಿಕ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಬೇಕು. ಪ್ರತಿಯೊಂದು ಇಲಾಖೆಗೆ ನಿರ್ದಿಷ್ಟ ಕಾರ್ಯಗಳನ್ನು



ವಹಿಸಲಾಗಿದೆ. ಕ್ರೇನ್‌ಗಳ ಮತ್ತು ವಾಹನಗಳ ಚಲನೆಯಲ್ಲಿ ಸರಿಯಾದ ಬಂದೋಬಸ್ತ್ ಮತ್ತು ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳುವ ಕಾರ್ಯವನ್ನು ಪೊಲೀಸ್, ಸಂಚಾರ ಮತ್ತು ಆರ್‌ಟಿಓ ಇಲಾಖೆಗೆ ನೀಡಲಾಗಿದ್ದು, ಸಂಬಧಿಸಿದ ಇಲಾಖೆಯ ಅಧಿಕಾರಿಗಳು ತಮ್ಮ ತಮ್ಮ ಕಾರ್ಯಗಳನ್ನು ಅಚ್ಚುಕಟ್ಟಾಗಿ ನಿರ್ವಹಣೆ ಮಾಡಬೇಕೆಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ರಾಯಚೂರು ಮಹಾನಗರ ಪಾಲಿಕೆ ಮತ್ತು ಪಿಡಬ್ಲ್ಯೂಡಿ ಇಲಾಖೆಗಳು ರಸ್ತೆ ಸುರಕ್ಷತೆ ಮತ್ತು ರಸ್ತೆ ಪ್ಯಾಚಿಂಗ್ ಅನ್ನು ಪರಿಶೀಲಿಸಬೇಕು. ಆರೋಗ್ಯ ಇಲಾಖೆಯು ನಗರ ವ್ಯಾಪ್ತಿಯಲ್ಲಿ ಅಗತ್ಯ ಆಂಬ್ಯುಲೆನ್ಸ್ ವ್ಯವಸ್ಥೆ ಮಾಡಬೇಕು. ಅಲ್ಲದೆ ಜೆಸ್ಕಾಂ ಇಲಾಖೆಯಿಂದ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಾಸವಾಗದಂತೆ ನೋಡಿಕೊಳ್ಳಬೇಕು. ಅಲ್ಲದೆ ಅಗ್ನಿಶಾಮಕ ಇಲಾಖೆಯ ವತಿಯಿಂದ ತಜ್ಞ ಈಜುಗಾರರು ಸ್ಥಳದಲ್ಲಿಯೇ ಇರುವಂತೆ ಕ್ರಮವಹಿಸಬೇಕೆಂದು ಜಿಲ್ಲಾಧಿಕಾರಿಗಳು ಸಂಬಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಈ ವೇಳೆ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ 2ನೇ ಪುಟಕ್ಕೆ

## ಮಂತ್ರಾಲಯದಲ್ಲಿ ಶ್ರೀ ಲಕ್ಷ್ಮೀ ಶೋಭಾನ ಪಾರಾಯಣ, ಕುಂಕುಮಾರ್ಚನೆ:
### 2 ಸಾವಿರಕ್ಕೂ ಹೆಚ್ಚು ಭಜನಾ ಮಂಡಳಿ ಸದಸ್ಯರು ಭಾಗಿ

ಮಂತ್ರಾಲಯ: ಶ್ರೀ ಮಠದ ಪೀಠಾಧಿಪತಿ ಪರಮಪೂಜ್ಯ ಶ್ರೀ ಸುಬುಧೇಂದ್ರ ತೀರ್ಥ ಸ್ವಾಮೀಜಿಗಳ 13ನೇ ಚಾತುರ್ಮಾಸ್ಯ ದೀಕ್ಷೆಯ ಪುಣ್ಯಾವಸರದ ಅಂಗವಾಗಿ ಶ್ರೀ ಮಠದಲ್ಲಿ ಇಂದು ಶ್ರೀ ಲಕ್ಷ್ಮೀ ದೇವಿಗೆ ಕುಂಕುಮಾರ್ಚನೆ ಹಾಗೂ ಶ್ರೀ ಲಕ್ಷ್ಮೀ ಶೋಭಾನ ಪಾರಾಯಣ ಕಾರ್ಯಕ್ರಮ ಭಕ್ತಿಭಾವದಿಂದ ನೆರವೇರಿತು.

ಶ್ರೀ ಗುರುಸಾರ್ವಭೌಮ ದಾಸಸಾಹಿತ್ಯ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಭಜನಾ ಮಂಡಳಿಗಳ 2 ಸಾವಿರಕ್ಕೂ ಹೆಚ್ಚು ಸದಸ್ಯರು ಈ ಆಧ್ಯಾತ್ಮಿಕ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಬೆಳಿಗ್ಗೆ ಆರಂಭವಾದ ಶ್ರೀ ಲಕ್ಷ್ಮೀ ಶೋಭಾನ ಪಾರಾಯಣವು ದಿನವಿಡೀ ಭಕ್ತಿಪೂರ್ವಕವಾಗಿ ನಡೆಯಿತು.

ಭಜನಾ ಮಂಡಳಿಗಳ ಸದಸ್ಯರು ಏಕಕಂಠದಿಂದ ಪಾರಾಯಣ ನಡೆಸಿದ ಹಿನ್ನೆಲೆಯಲ್ಲಿ ಶ್ರೀ ಮಠದ ಆವರಣ ಭಕ್ತಿಮಯ ವಾತಾವರಣದಿಂದ ಕಂಗೊಳಿಸಿತು. ಶ್ರೀ ಲಕ್ಷ್ಮೀ ದೇವಿಗೆ ವಿಶೇಷ ಕುಂಕುಮಾರ್ಚನೆ ನೆರವೇರಿಸಿ, ಶ್ರೀ ರಾಘವೇಂದ್ರ ಗುರುಸಾರ್ವಭೌಮರು ಹಾಗೂ ಶ್ರೀ ಲಕ್ಷ್ಮೀ ದೇವಿಯ ಅನುಗ್ರಹಕ್ಕಾಗಿ ಪ್ರಾರ್ಥನೆ ಸಲ್ಲಿಸಲಾಯಿತು.



ಸಂಜೆ ಕಾರ್ಯಕ್ರಮದ ಸಮಾರೋಪ ಸಂದರ್ಭದಲ್ಲಿ ಪರಮಪೂಜ್ಯ ಶ್ರೀ ಸುಬುಧೇಂದ್ರ ತೀರ್ಥ ಸ್ವಾಮೀಜಿಗಳು ಭಕ್ತರಿಗೆ ಅನುಗ್ರಹ ಸಂದೇಶ ನೀಡಿದರು. ಭಕ್ತಿ, ನಾಮಸ್ಮರಣೆ, ಪಾರಾಯಣ ಹಾಗೂ ದಾಸಸಾಹಿತ್ಯದ ಮೂಲಕ ಜೀವನದಲ್ಲಿ ಆಧ್ಯಾತ್ಮಿಕ ಮೌಲ್ಯಗಳನ್ನು ಬೆಳೆಸಿಕೊಳ್ಳುವ ಮಹತ್ವವನ್ನು ತಿಳಿಸಿದರು.

ಕಾರ್ಯಕ್ರಮದ ಬಳಿಕ ಶ್ರೀ ಸ್ವಾಮೀಜಿಗಳು ಭಾಗವಹಿಸಿದ್ದ ಎಲ್ಲ ಭಜನಾ ಮಂಡಳಿ ಸದಸ್ಯರು ಹಾಗೂ ಭಕ್ತರಿಗೆ ಫಲಮಂತ್ರಾಕ್ಷತೆ ನೀಡಿ ಆಶೀರ್ವದಿಸಿದರು. ಶ್ರೀ ರಾಯರು ಹಾಗೂ ಶ್ರೀ ಲಕ್ಷ್ಮೀ



ದೇವಿಯ ಕೃಪೆ ಎಲ್ಲರ ಮೇಲಿರಲಿ ಎಂದು ಹರಸಿದರು.

ದಿನವಿಡೀ ನಡೆದ ಪಾರಾಯಣ, ಕುಂಕುಮಾರ್ಚನೆ ಹಾಗೂ ಭಜನಾ ಕಾರ್ಯಕ್ರಮಗಳಲ್ಲಿ ಭಕ್ತರು ಅಪಾರ ಸಂಖ್ಯೆಯಲ್ಲಿ ಭಾಗವಹಿಸಿದ್ದು, ಶ್ರೀ ಮಠದಲ್ಲಿ ಧಾರ್ಮಿಕ ಸಂಭ್ರಮ ಮನೆಮಾಡಿತ್ತು.

## ಗಣೇಶ ಹಬ್ಬ ಹಿನ್ನಲೆಯಲ್ಲಿ 23 ಜನರ ವಿರುದ್ಧ ಗಡಿಪಾರಿಗೆ ಕ್ರಮ:
### ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಷು ಗಿರಿ

ರಾಯಚೂರು ಸೆಪ್ಟಂಬರ್ 09 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲೆಯಲ್ಲಿ ಸೆಪ್ಟಂಬರ್ 14ರಂದು ಗಣೇಶ ಪ್ರತಿಷ್ಠಾಪನೆಗೊಳ್ಳುತ್ತಿದ್ದು, ರಾಯಚೂರು ಜಿಲ್ಲೆಯಲ್ಲಿ ಗಣೇಶ ಹಬ್ಬದ ಸಮಯದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಜಿಲ್ಲೆಯಲ್ಲಿ ಒಟ್ಟು 23 ಜನರ ವಿರುದ್ಧ ಗಡಿಪಾರಿಗೆ ಕ್ರಮ ಜರುಗಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಷು ಗಿರಿ ಅವರು ತಿಳಿಸಿದ್ದಾರೆ.

ಒಟ್ಟು 2570 ಗಣೇಶ ಮೂರ್ತಿಗಳು ಜಿಲ್ಲೆಯಾದ್ಯಂತ ಪ್ರತಿಷ್ಠಾಪನೆ ಮಾಡುತ್ತಿರುವ ಹಿನ್ನಲ್ಲೆಯಲ್ಲಿ ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಹಾಗೂ ಯಾವುದೇ ಅಹಿತಕರ ಘಟನೆಗಳು ಜರುಗದಂತೆ ನೊಡಿಕೊಳ್ಳುವ ಸಲುವಾಗಿ ಎಲ್ಲಾ ಗಣೇಶ ಮಂಡಳಿರವರಿದ ಮುಚ್ಚಳಿಕೆ ಪತ್ರವನ್ನು ಬರೆಯಿಸಿಕೊಂಡಿದ್ದು, ರಾಯಚೂರು ನಗರ ಸೇರಿದಂತೆ ಜಿಲ್ಲೆಯ ಎಲ್ಲಾ ತಾಲೂಕ ಹಾಗೂ ಗ್ರಾಮಗಳು ಸೇರಿದಂತೆ ವಿವಿಧ ಸಮುದಾಯದ ಮುಖಂಡರನ್ನು ಹಾಗೂ ಇತರೆ ಇಲಾಖೆಗಳ ಅಧಿಕಾರಿಗಳು ಒಳಗೊಂಡತೆ ಶಾಂತಿ ಸಭೆಗಳನ್ನು ಜರುಗಿಸಲಾಗಿದೆ.



ರಾಯಚೂರು ಜಿಲ್ಲೆಯಲ್ಲಿ ಗಣೇಶ ಹಬ್ಬದ ಸಮಯದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಜಿಲ್ಲೆಯಲ್ಲಿ ಪ್ರಚಲಿತದಲ್ಲಿರುವ ಒಟ್ಟು 1557 ರೌಡಿ ಆಸಾಮಿಗಳ ಪೈಕಿ 1454 ಜನರ ಮೇಲೆ ಮುಂಜಾಗ್ರತಾ ಕ್ರಮ ಕುರಿತು ಕ್ರಮ ಜರುಗಿಸಿದ್ದು, ಅವುಗಳ ಪೈಕಿ 1124 ಜನರಿಗೆ ಮುಚ್ಚಳಿಕೆ ಪತ್ರವನ್ನು ತಾಲೂಕ ದಂಡಾಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ಅಧಿಕಾರಿಗಳು ಇವರಿಗೆ ಬರೆಯಿಸಿಕೊಡಲಾಗಿದ್ದು, ಒಟ್ಟು 23 ಜನರ ವಿರುದ್ಧ ಗಡಿಪಾರಿಗೆ ಕ್ರಮ ಜರುಗಿಸಲಾಗಿದೆ.

ರಾಯಚೂರು ಜಿಲ್ಲೆಯಲ್ಲಿ ಗಣೇಶ ಹಬ್ಬದ ಶಾಂತಿ ಸುವ್ಯವಸ್ಥೆ ಕಾಪಾಡುವ ಕುರಿತು ಬಂದೋಬಸ್ತ್ ಕರ್ತವ್ಯಕ್ಕೆ ಹೆಚ್ಚುವರಿ ಎಸ್.ಪಿ-01, ಡಿಎಸ್‌ಪಿ-04, ಪಿಐ/ಸಿಪಿಐ-31, ಎಎಸ್‌ಐ -122, ಹೆಚ್‌ಸಿ/ಪಿಸಿ-630, ಗೃಹ ರಕ್ಷಕದಳ ಸಿಬ್ಬಂದಿ-500, ಸಶಸ್ತ್ರ ಮೀಸಲು ಪಡೆ-10 ತುಕಡಿ, ಕೆ.ಎಸ್.ಆರ್.ಪಿ-06 ತುಕಡಿ ಮತ್ತು ಎ.ಎಸ್.ಸಿ-01 ತಂಡವನ್ನು ಭದ್ರತೆಗಾಗಿ ನಿಯೋಜನೆ ಮಾಡಲಾಗಿದೆ.

ಗಣೇಶ ಹಬ್ಬದ ಆಚರಣೆ ನೆಪದಲ್ಲಿ ಮಾದಕ ದ್ರವ್ಯಗಳನ್ನು ಸೇವಿಸಿ, ಯುವಕರು ಬೈಕ್ ವೀಲ್ಡಿಂಗ್ ಮಾಡುವವರ ವಿರುದ್ಧ, ಮಹಿಳೆಯರು ಮತ್ತು ಮಕ್ಕಳಿಗೆ ಹಾಗೂ ವೃದ್ಧರಿಗೆ ತೊಂದರೆ, ಕಿರಿಕಿರಿ ಉಂಟು ಮಾಡುವವರು ನಿಷೇಧಿತ ಸ್ಥಳಗಳಲ್ಲಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಕಾನೂನು ಬಾಹಿರ ಚಟುವಟಿಕೆಗಳಲ್ಲಿ ತೊಡಗುವವರ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು.

ಗಣೇಶ ಹಬ್ಬದ ಆಚರಣೆಯನ್ನು ಸ್ಪೂರ್ತಿದಾಯಕ ರೀತಿಯಲ್ಲಿ ಶಾಂತ ರೀತಿಯಿಂದ ಹಾಗೂ ಯಾವುದೇ ಅಹಿತಕರ ಘಟನೆಗಳಿಗೆ ಆಸ್ಪದ ನೀಡದೇ ಆಚಸುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಷು ಗಿರಿ ಅವರು ಸಾರ್ವಜನಿಕಲ್ಲಿ ಕೋರಿದ್ದಾರೆ.

## ಮತದಾರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಜಾಗೃತಿ ಜಾಥಾ
### ಮತದಾರ ಪಟ್ಟಿಯಲ್ಲಿ ತಪ್ಪದೆ ಹೆಸರು ಸೇರ್ಪಡೆಗೊಳಿಸಿ: ಡಾ.ನಂದಿತಾ



ರಾಯಚೂರು ಸೆಪ್ಟಂಬರ್ 09 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲೆಯ ಸಾರ್ವಜನಿಕರು ತಮ್ಮ ಹೆಸರು ಮತದಾನ ಪಟ್ಟಿಯಲ್ಲಿ ಇಲ್ಲದಿರುವ ಕುರಿತು ಮಾಹಿತಿ ಬಂದಲ್ಲಿ ಹತ್ತಿರದ ಬೂತ್ ಮಟ್ಟದ ಅಧಿಕಾರಿಗಳಿಗೆ ಅಗತ್ಯ ದಾಖಲಾತಿಗಳನ್ನು ನೀಡಿ, ಹೆಸರು ಸೇರ್ಪಡೆಗೊಳಿಸಿಕೊಳ್ಳಿ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ನಂದಿತಾ ಎಮ್.ಎನ್. ಅವರು ಹೇಳಿದರು.

ಸೆಪ್ಟಂಬರ್ 09ರ ಬುಧವಾರ ದಂದು ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಸ್ವೀಪ್ ಸಮಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಾನಗರ ಪಾಲಿಕೆ, ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿ ರಾಯಚೂರು ಸಹಯೋಗದೊಂದಿಗೆ ಎಸ್.ಐ.ಆರ್. ಕುರಿತು ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಜಿಲ್ಲೆಯ ಎಲ್ಲ ಆರೋಗ್ಯ ಕೇಂದ್ರಗಳಲ್ಲಿ ಜನತೆಗೆ ಜಾಗೃತಿ ನೀಡಲಾಗುತ್ತಿದ್ದು, 2002ರ ಮತದಾರ ಪಟ್ಟಿ ಅನ್ವಯ ಮತದಾರರ ಪಟ್ಟಿಯಲ್ಲಿ ಹೆಸರು ತಪ್ಪಿದಲ್ಲಿ ಆತಂಕಕ್ಕೆ ಒಳಗಾಗದೆ, ಅಗತ್ಯ ದಾಖಲಾತಿಗಳೊಂದಿಗೆ ಬಿಎಲ್‌ಓ ರವರನ್ನು ಬೇಟಿಯಾಗಿ ನೊಂದಾಯಿಸಬೇಕು. ಹಾಗೂ 18 ವರ್ಷ ತುಂಬಿದ ಯುವತಿ, ಯುವಕರು ತಮ ಮತದಾರರ ಪಟ್ಟಿಯಲ್ಲಿ ಹೆಸರು ನೊಂದಾಯಿಸಿ ಎಂದರು..

ನಗರದ ಪ್ರಮುಖ ರಸ್ತೆಗಳಲ್ಲಿ ಜಾಥಾ: ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ವಿಶೇಷ ಅಭಿಯಾನ ಕಾರ್ಯ ಕ್ರಮ ಜಾಗೃತಿ ಜಾಥವನ್ನು ನಗರದ ಡಿ.ಹೆಚ್.ಓ ಕಚೇರಿ ಯಿಂದ, ತೀನಕಂದಿಲ್, ಉಸ್ಮಾನಿಯಾ ಮಾರ್ಕೆಟ್, ಮಹಾವೀರ ಸರ್ಕಲ್, ಜೈನ್ ಟೆಂಪಲ್ ರಸ್ತೆ ಮೂಲಕ ಜಾಥಾದೊಂದಿಗೆ ಜನರಲ್ಲಿ ಜಾಗೃತಿ 2ನೇ ಪುಟಕ್ಕೆ

## ಸೆ.16ರಿಂದ ಸಿಪಿಐ(ಎಂಎಲ್) ರೆಡ್‌ಸ್ಟಾರ್ 13ನೇ ರಾಷ್ಟ್ರೀಯ ಮಹಾ ಅಧಿವೇಶನ

ರಾಯಚೂರು, ಸೆ.9: ಸಿಪಿಐ(ಎಂಎಲ್) ರೆಡ್‌ಸ್ಟಾರ್ ಪಕ್ಷದ 13ನೇ ರಾಷ್ಟ್ರೀಯ ಕಮ್ಯುನಿಸ್ಟ್ ಮಹಾ ಅಧಿವೇಶನವನ್ನು ಸೆಪ್ಟೆಂಬರ್ 16ರಿಂದ 20ರವರೆಗೆ ರಾಯಚೂರಿನಲ್ಲಿ ಆಯೋಜಿಸಲಾಗಿದೆ ಎಂದು ಸ್ವಾಗತ ಸಮಿತಿಯ ಮುಖ್ಯ ಸಂಯೋಜಕ ಆರ್. ಮಾನಸಯ್ಯ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ಕಾರ್ಮಿಕರು, ರೈತರು, ದಲಿತರು, ಆದಿವಾಸಿಗಳು, ಮಹಿಳೆಯರು ಹಾಗೂ ದಮನಿತ ಸಮುದಾಯಗಳ ಹಕ್ಕುಗಳ ರಕ್ಷಣೆಗೆ ನಡೆಯುತ್ತಿರುವ ಹೋರಾಟಗಳನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಈ ಅಧಿವೇಶನ ಹಮ್ಮಿಕೊಳ್ಳಲಾಗಿದೆ ಎಂದರು. ಸೆ.16ರಂದು ಬೆಳಿಗ್ಗೆ 10.30ಕ್ಕೆ ಪಂಡಿತ್ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದ ಚಾರು ಮಜುಂದಾರ್ ಸಭಾಂಗಣದಲ್ಲಿ ಅಧಿವೇಶನಕ್ಕೆ ಚಾಲನೆ ಸಿಗಲಿದೆ. ಪಕ್ಷದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಹಾಗೂ ಮಾರ್ಕ್ಸ್‌ವಾದಿ ಅರ್ಥಶಾಸ್ತ್ರಜ್ಞ ಪಿ.ಜೆ. ಜೇಮ್ಸ್ ಉದ್ಘಾಟನಾ ಭಾಷಣ




ಮಾಡಲಿದ್ದಾರೆ. ದೇಶದ 14 ರಾಜ್ಯಗಳಿಂದ ಸುಮಾರು 300 ಚುನಾಯಿತ ಪ್ರತಿನಿಧಿಗಳು ಪಾಲ್ಗೊಳ್ಳಲಿದ್ದು, ಶ್ರೀಲಂಕಾ, ಬಾಂಗ್ಲಾದೇಶ, ನೇಪಾಳ ಹಾಗೂ ಕೀನ್ಯಾ ಸೇರಿದಂತೆ ವಿವಿಧ ದೇಶಗಳ ಕಮ್ಯುನಿಸ್ಟ್ ಪಕ್ಷಗಳ ಮುಖಂಡರು ಭಾಗವಹಿಸಲಿದ್ದಾರೆ ಎಂದು ಹೇಳಿದರು. ಅಧಿವೇಶನದಲ್ಲಿ ದೇಶದ ರಾಜಕೀಯ, ಆರ್ಥಿಕ ಹಾಗೂ ಸಾಮಾಜಿಕ ಪರಿಸ್ಥಿತಿಗಳ ಕುರಿತು ಚರ್ಚೆ ನಡೆಯಲಿದ್ದು, ಕಾರ್ಪೊರೇಟ್ ಬಂಡವಾಳಶಾಹಿ, ಜಾತಿ ತಾರತಮ್ಯ, ಧಾರ್ಮಿಕ ಅಸಮಾನತೆ, ಶೋಷಣೆ ಮತ್ತು ಪ್ರಜಾಪ್ರಭುತ್ವದ ಮೇಲಿನ ದಾಳಿಗಳ ವಿರುದ್ಧ ಮುಂದಿನ ಹೋರಾಟದ ದಿಕ್ಕು ನಿರ್ಧರಿಸಲಾಗುವುದು ಎಂದು ಮಾನಸಯ್ಯ ತಿಳಿಸಿದರು.

ಮಹಾ ಅಧಿವೇಶನದ ಭಾಗವಾಗಿ ಸೆ.18ರಂದು ಆರ್‌ಎಸ್‌ಎಸ್ ಫ್ಯಾಸಿಸಂನ್ನು ಕಿತ್ತೆಸೆಯುವ ಕಾರ್ಯಭಾರಗಳು ಹಾಗೂ ಸೆ.19ರಂದು ಜಾತಿ ವಿನಾಶದ ಸವಾಲುಗಳು ವಿಷಯಗಳ ಕುರಿತು ಅಖಿಲ ಭಾರತ ವಿಚಾರ ಸಂಕಿರಣಗಳು ನಡೆಯಲಿವೆ. ವಿಚಾರವಾದಿ ಪ್ರೊ. ಕೆ.ಎಸ್. ಭಗವಾನ್, 2ನೇ ಪುಟಕ್ಕೆ

## ಕ್ರೀಡೆಗಳಿಂದ ದೈಹಿಕ ಸದೃಢತೆ, ನಾಯಕತ್ವ ಗುಣ ವೃದ್ಧಿ: ಕರೆಮ್ಮ ಜಿ. ನಾಯಕ

ದೇವದುರ್ಗ: ವಿದ್ಯಾರ್ಥಿ ಜೀವನದಲ್ಲಿ ಕ್ರೀಡೆಗಳಲ್ಲಿ ಭಾಗವಹಿಸುವುದರಿಂದ ಬದುಕಿನ ಮೌಲ್ಯಗಳನ್ನು ಅರಿಯಲು, ದೈಹಿಕವಾಗಿ ಸದೃಢರಾಗಲು ಹಾಗೂ ಸಾಧಿಸುವ ಛಲ ಬೆಳೆಸಿಕೊಳ್ಳಲು ಸಾಧ್ಯವಾಗುತ್ತದೆ. ಕ್ರೀಡಾಪಟುಗಳು ಸೋಲು ಮತ್ತು ಗೆಲುವನ್ನು ಸಮಾನವಾಗಿ ಸ್ವೀಕರಿಸಬೇಕು ಎಂದು ಶಾಸಕಿ ಕರೆಮ್ಮ ಜಿ. ನಾಯಕ ಹೇಳಿದರು.

ಪಟ್ಟಣದ ಹೊರವಲಯದ ತಾಲೂಕು ಕ್ರೀಡಾಂಗಣದಲ್ಲಿ ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ ಮತ್ತು ಖೇಣೇದ್ ಮುರಿಗೆಪ್ಪ ಮಹಾವಿದ್ಯಾಲಯದ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಪ್ರಾಥಮಿಕ ಹಾಗೂ ಪ್ರೌಢಶಾಲಾ ಮಕ್ಕಳ ತಾಲೂಕು ಮಟ್ಟದ ಕ್ರೀಡಾಕೂಟವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಪಠ್ಯಾಭ್ಯಾಸದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲೂ ನಿರಂತರವಾಗಿ ತೊಡಗಿಸಿಕೊಳ್ಳಬೇಕು. ಕ್ರೀಡೆಗಳು ವಿದ್ಯಾರ್ಥಿಗಳ ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಉತ್ತಮಗೊಳಿಸುವುದರ ಜೊತೆಗೆ ಆತ್ಮವಿಶ್ವಾಸ, ಶಿಸ್ತು, ಸಹಕಾರ ಮನೋಭಾವ ಹಾಗೂ ನಾಯಕತ್ವ




ಗುಣಗಳನ್ನು ಬೆಳೆಸುತ್ತವೆ. ನಿರಂತರ ಅಭ್ಯಾಸ ಮತ್ತು ಸೂಕ್ತ ತರಬೇತಿಯಿಂದ ಕ್ರೀಡಾ ಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡಲು ಸಾಧ್ಯ ಎಂದು ತಿಳಿಸಿದರು.

ತಾಲೂಕು ಕ್ರೀಡಾಂಗಣದ ಅಭಿವೃದ್ಧಿಗೆ ಅನುದಾನ ನೀಡಲಾಗಿದ್ದು, ಕ್ರೀಡಾಂಗಣಕ್ಕೆ ಸಂಪರ್ಕ ಕಲ್ಪಿಸುವ ಉತ್ತಮ ರಸ್ತೆ ನಿರ್ಮಾಣಕ್ಕೂ ಆದ್ಯತೆ ನೀಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಅವರು ಹೇಳಿದರು. ನಿತ್ಯದ ಒತ್ತಡದ ಜೀವನದಲ್ಲಿ ಉತ್ತಮ ಆರೋಗ್ಯ ಮತ್ತು ಸದೃಢ ಜೀವನಕ್ಕೆ ಕ್ರೀಡೆಗಳು ಅತ್ಯಂತ ಸಹಕಾರಿಯಾಗಿವೆ ಎಂದರು.

ಕಾರ್ಯಕ್ರಮದಲ್ಲಿ ಕ್ಷೇತ್ರ ಸಮನ್ವಯಾಧಿಕಾರಿ ಶಿವರಾಜ್ ಪೂಜಾರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ತಾಲೂಕು ಗ್ಯಾರಂಟಿ ಯೋಜನೆ ಅಧ್ಯಕ್ಷ ಲಕ್ಷ್ಮಣ ಜ್ಯೋತಿ ಮಾತನಾಡಿದರು. ದೈಹಿಕ ಶಿಕ್ಷಣಾಧಿಕಾರಿ ಬಾಲಪ್ಪ ಬಾವಿಮನಿ ಕ್ರೀಡಾಪಟುಗಳಿಗೆ ಕ್ರೀಡಾ ಪ್ರತಿಜ್ಞಾವಿಧಿ ಬೋಧಿಸಿದರು.

ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ರಾಧಾದೇವಿ, ಪ್ರಕಾಶ ಖೇಣೇದ್, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಹನುಮಂತರಾಯ ಶಾಖೆ, ಬಸವರಾಜ ಕಟ್ಟಿಮನಿ, ಗಂಗಾಧರ, ನೇಮಣ್ಣ ಚೌಹಾಣ್, ಬಸವರಾಜ ಯಟಗಲ್, ಶಂಕರಲಿಂಗಯ್ಯ, ರಂಗನಾಥ ಸಿ., ಬಸನಗೌಡ ದೇಸಾಯಿ, ಸಿದ್ದಣ್ಣ ಗಣೆಕಲ್, ಗೋವಿಂದರಾಜ ಚಿಕ್ಕಗುಡ್ಡ, ರಮೇಶ ರಾಮನಾಳ ಸೇರಿದಂತೆ ಶಿಕ್ಷಕರು, ಕ್ರೀಡಾಪಟುಗಳು ಹಾಗೂ ಮುಖಂಡರು ಉಪಸ್ಥಿತರಿದ್ದರು.

# ಆತ್ಮಹತ್ಯೆ ಆಲೋಚನೆಗಳನ್ನು ತಡೆಗಟ್ಟಲು ಆಪ್ತಸಲಹೆ

ಆತ್ಮಹತ್ಯೆ ಎಂಬುದು ಗಂಭೀರವಾದ ಮನೋಸಾಮಾಜಿಕ ಸಮಸ್ಯೆಯಾಗಿದೆ. ಇದು ಕುಟುಂಬ, ಸಮಾಜ ಮತ್ತು ರಾಷ್ಟ್ರದ ಪ್ರಗತಿಯ ಮೇಲೆ ತೀವ್ರತರವಾದ ದುಷ್ಪರಿಣಾಮವನ್ನು ಉಂಟುಮಾಡುತ್ತಿದೆ. ಇದನ್ನು ತಡೆಗಟ್ಟುವ ಮೂಲಕ ಅಮೂಲ್ಯವಾದ ಜೀವಗಳನ್ನು ರಕ್ಷಿಸುವ ಉದ್ದೇಶದಿಂದ ಅಂತಾರಾಷ್ಟ್ರೀಯ ಆತ್ಮಹತ್ಯೆ ತಡೆಗಟ್ಟುವಿಕೆ ಸಂಸ್ಥೆ ಮತ್ತು ವಿಶ್ವ ಆರೋಗ್ಯ ಸಂಸ್ಥೆಯು ಜನಸಾಮಾನ್ಯರಲ್ಲಿ ಆತ್ಮಹತ್ಯೆ ತಡೆಗಟ್ಟುವ ಕುರಿತು ಅರಿವು ಮೂಡಿಸಲು ಪ್ರತಿವರ್ಷ ಸೆಪ್ಟೆಂಬರ್ 10ರಂದು ಜಾಗತಿಕ ಮಟ್ಟದಲ್ಲಿ ಆತ್ಮಹತ್ಯೆ ತಡೆಗಟ್ಟುವಿಕೆ ದಿನಾಚರಣೆಯನ್ನು ಆಚರಿಸಲಾಗುತ್ತಿದೆ.

ಆತ್ಮಹತ್ಯೆ ಎಂದರೆ ವ್ಯಕ್ತಿಯು ಉದ್ದೇಶಪೂರ್ವಕವಾಗಿ, ಸ್ವಯಂಪ್ರೇರಿತವಾಗಿ ಜೀವವನ್ನು ಬಲಿತೆಗೆದುಕೊಳ್ಳುವ ಪ್ರಕ್ರಿಯೆಯಾಗಿದೆ. ಆತ್ಮಹತ್ಯೆಗೆ ಪ್ರಯತ್ನಿಸುವ ವ್ಯಕ್ತಿಗಳಲ್ಲಿ ಸ್ವಯಂಪ್ರೇರಿತ ಹಾನಿಕಾರಕ ವರ್ತನೆಗಳು, ಆಲೋಚನೆಗಳು ಮತ್ತು ಸಾಯುವ ಉದ್ದೇಶಿತ ಮನೋಭಾವಗಳು ಹೆಚ್ಚಾಗಿ ಕಂಡುಬರುತ್ತವೆ. ಆತ್ಮಹತ್ಯೆಗೆ ಪ್ರಯತ್ನಿಸುವ ವ್ಯಕ್ತಿಗಳ ನಕಾರಾತ್ಮಕ ಆಲೋಚನೆಗಳು ಮತ್ತು ವರ್ತನೆಗಳನ್ನು ಪ್ರಾರಂಭಿಕ ಹಂತದಲ್ಲೇ ಸೂಕ್ಷ್ಮವಾಗಿ ಅವಲೋಕಿಸಿ, ಅರ್ಥಮಾಡಿಕೊಂಡು, ಬದುಕಿನ ಬಗ್ಗೆ ಸಕಾರಾತ್ಮಕ ಆಲೋಚನೆಗಳು ರೂಪುಗೊಳ್ಳುವಂತೆ ಮಾಡುವಲ್ಲಿ ಆಪ್ತಸಲಹೆಯು ಅತ್ಯವಶ್ಯಕವಾಗಿದೆ.

ಪ್ರತಿವರ್ಷ ವಿಶ್ವದಾದ್ಯಂತ ಸುಮಾರು ಒಂದು ಮಿಲಿಯನ್ ಜನರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಭಾರತದಲ್ಲಿ ಪ್ರತಿವರ್ಷ ಒಂದು ಲಕ್ಷಕ್ಕಿಂತಲೂ ಹೆಚ್ಚು ಜನರು ಆತ್ಮಹತ್ಯೆಗೆ ಬಲಿಯಾಗುತ್ತಿದ್ದಾರೆ. ಸಂಶೋಧನಾ ವರದಿಗಳ ಪ್ರಕಾರ ಆತ್ಮಹತ್ಯೆಯ ಪ್ರಮಾಣ ಮಹಿಳೆಯರಿಗಿಂತ ಹೆಚ್ಚಾಗಿ ಪುರುಷರಲ್ಲಿ ಕಂಡುಬರುತ್ತಿದೆ. ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿಗಳ ಆತ್ಮಹತ್ಯೆಯ ಪ್ರಮಾಣವೂ ಹೆಚ್ಚಾಗುತ್ತಿದೆ. ಆದಕಾರಣ ಪ್ರಾಥಮಿಕ ಹಂತದಲ್ಲೇ ಆತ್ಮಹತ್ಯೆಯ ಆಲೋಚನೆ ಮತ್ತು ವರ್ತನೆಯ ಮುನ್ಸೂಚನೆಗಳನ್ನು ಸೂಕ್ಷ್ಮವಾಗಿ ಗಮನಿಸಿ, ಆತ್ಮಹತ್ಯೆಯನ್ನು ತಡೆಗಟ್ಟಲು ಮುಂಜಾಗ್ರತೆ ವಹಿಸುವುದು ಅತ್ಯಗತ್ಯವಾಗಿದೆ.

### ಆತ್ಮಹತ್ಯೆಗೆ ಕಾರಣಗಳು:

- ಆತಂಕ, ಖಿನ್ನತೆ, ಸ್ಕಿಜೋಫ್ರೇನಿಯಾ, ದೀರ್ಘಕಾಲಿಕ ಒತ್ತಡಗಳು, ಕೀಳರಿಮೆ ಮನೋಭಾವ, ಭಾವನಾತ್ಮಕ ತೊಂದರೆಗಳು ಮತ್ತು ವ್ಯಕ್ತಿತ್ವ ವಿಕಾರಗಳು ಸೇರಿದಂತೆ ಶೇ.90ರಷ್ಟು ಮಾನಸಿಕ ಸಮಸ್ಯೆಗಳು.
- ಜೀವನದಲ್ಲಿ ಅನುಭವಿಸುವ ನಿರಂತರ ಸೋಲು ಮತ್ತು ಅವಮಾನಗಳಿಂದ ಉಂಟಾಗುವ ಹತಾಶೆ.
- ವಿದ್ಯಾಭ್ಯಾಸದಲ್ಲಿ ವಿಫಲತೆ, ಪರೀಕ್ಷೆಗಳು ಮತ್ತು ಫಲಿತಾಂಶಗಳ ಬಗ್ಗೆ ಅತಿಯಾದ ಆತಂಕ.
- ಬದುಕಿನಲ್ಲಿ ಎದುರಾಗುವ ಕಠಿಣ ಸನ್ನಿವೇಶಗಳು, ಸವಾಲುಗಳು ಹಾಗೂ ಸಮಸ್ಯೆಗಳನ್ನು ಸ್ವೀಕರಿಸಲಾಗದ ದುರ್ಬಲ ಮನಸ್ಥಿತಿ.
- ವೈವಾಹಿಕ ಸಂಬಂಧಗಳಲ್ಲಿ ಬಿರುಕು, ಹಣಕಾಸಿನ ತೊಂದರೆ, ಉದ್ಯೋಗ, ವ್ಯವಹಾರ ಮತ್ತು ಕೃಷಿಯಲ್ಲಿ ನಷ್ಟ, ಸಾಮಾಜಿಕ ಸಂಬಂಧಗಳ ವಿಘಟನೆ, ಕೌಟುಂಬಿಕ ದೌರ್ಜನ್ಯ, ಮಾನಸಿಕ ಕಿರುಕುಳ, ಔದ್ಯೋಗಿಕ ಒತ್ತಡ ಮುಂತಾದ ಸಾಮಾಜಿಕ ಕಾರಣಗಳು.
- ದೀರ್ಘಕಾಲ ಅನುಭವಿಸುವ ದೈಹಿಕ ಅನಾರೋಗ್ಯ ಮತ್ತು ನೋವುಗಳು.
- ಜೀವನ ಸಾಕಾಗಿದೆ, ಬದುಕಲು ನನಗೆ ಇಷ್ಟವಿಲ್ಲ, ಜೀವನದಲ್ಲಿ ಸಾಧಿಸುವುದೇನೂ ಇಲ್ಲ, ನನ್ನಂತವರು ಭೂಮಿಯ ಮೇಲೆ ಬದುಕಿರಬಾರದು ಎಂಬ ನಕಾರಾತ್ಮಕ ಆಲೋಚನೆಗಳನ್ನು ಆತ್ಮಹತ್ಯೆಗೆ ಪ್ರಯತ್ನಿಸುವ ವ್ಯಕ್ತಿಗಳು ನಿರಂತರವಾಗಿ ಅಭಿವ್ಯಕ್ತಪಡಿಸುತ್ತಾರೆ.
- ಆತ್ಮಹತ್ಯೆ ಆಲೋಚನೆ ಇರುವ ವ್ಯಕ್ತಿಗಳು ತಮ್ಮದೇ ಆದ ಪ್ರಪಂಚದಲ್ಲಿ ಸಿಲುಕಿಕೊಂಡು ಏಕಾಂಗಿಯಾಗಿ ಬದುಕಲು ಪ್ರಯತ್ನಿಸುತ್ತಾರೆ. ಭಾವನೆಗಳನ್ನು ಇತರರೊಂದಿಗೆ ಮುಕ್ತವಾಗಿ ಹಂಚಿಕೊಳ್ಳದೆ ಮಾನಸಿಕವಾಗಿ ಕೊರಗುತ್ತಾರೆ.
- ಜೀವನದಲ್ಲಿ ಎದುರಾಗುವ ಸೋಲು, ನೋವುಗಳನ್ನು ಸ್ವೀಕರಿಸಲಾಗದೆ ನಿರಂತರವಾಗಿ ಅಳುವುದು ಮತ್ತು ಅಸಹಾಯಕತೆಯನ್ನು ವ್ಯಕ್ತಪಡಿಸುತ್ತಾರೆ.
- ಬದುಕಿನ ಬಗ್ಗೆ ನಿರ್ಲಕ್ಷ್ಯದ ಭಾವನೆ ರೂಢಿಸಿಕೊಂಡು ವಿಪರೀತವಾಗಿ ಕುಡಿಯುವುದು, ಧೂಮಪಾನ ಮಾಡುವುದು, ಮಾದಕ ವ್ಯಸನಕ್ಕೆ ಬಲಿಯಾಗುವುದು, ಅಜಾಗರೂಕತೆಯಿಂದ ರಸ್ತೆ ದಾಟುವುದು, ವಾಹನ ಚಲಾಯಿಸುವುದು ಮುಂತಾದ ನಕಾರಾತ್ಮಕ ವರ್ತನೆಗಳಲ್ಲಿ ತೊಡಗುತ್ತಾರೆ.
- ಜೀವನದ ಸವಾಲುಗಳನ್ನು ನಿಭಾಯಿಸಲು ನಾನು ಅಸಮರ್ಥ, ನಿಷ್ಪ್ರಯೋಜಕ, ಸಮಸ್ಯೆ ಪರಿಹರಿಸುವ ಸಾಮರ್ಥ್ಯ ನನ್ನಲ್ಲಿಲ್ಲ ಎಂಬ ಆತ್ಮವಿಶ್ವಾಸದ ಕೊರತೆಯನ್ನು ವ್ಯಕ್ತಪಡಿಸುತ್ತಾರೆ.
- ಅತಿಯಾದ ಆತ್ಮಹತ್ಯೆ ಆಲೋಚನೆಗಳ ಪರಿಣಾಮವಾಗಿ ಸಾವಿನ ಬಗ್ಗೆ ಭಯಪಡುವುದನ್ನು ಬಿಟ್ಟು ಆತ್ಮಹತ್ಯೆಗೆ ಪ್ರಯತ್ನಿಸುತ್ತಾರೆ.
- ದೈನಂದಿನ ಜೀವನದಲ್ಲಿ ಸ್ವ-ಆರೈಕೆ, ಆರೋಗ್ಯ ಸಂರಕ್ಷಣೆ ಮತ್ತು ಆಹಾರ ಸೇವನೆಯ ಬಗ್ಗೆ ನಿರಾಸಕ್ತಿ ವಹಿಸುತ್ತಾರೆ.
- ಜೀವನದ ಬಗ್ಗೆ ಬೇಸರಗೊಂಡು ಸಾಮಾಜಿಕ ಸಂಪರ್ಕ ಮತ್ತು ಬಾಂಧವ್ಯಗಳಿಂದ ದೂರ ಉಳಿಯುತ್ತಾರೆ.




ಆತ್ಮಹತ್ಯೆ ಆಲೋಚನೆಯುಳ್ಳ ವ್ಯಕ್ತಿಗಳಲ್ಲಿ ಕಂಡುಬರುವ ವರ್ತನಾ ಮುನ್ಸೂಚನೆಗಳನ್ನು ಗುರುತಿಸಿ, ಅರ್ಥಮಾಡಿಕೊಂಡು, ಸಮಯೋಚಿತವಾಗಿ ತಕ್ಷಣ ಆಪ್ತಸಲಹೆ ನೀಡುವುದರಿಂದ ಆತ್ಮಹತ್ಯೆಯ ಆಲೋಚನೆಗಳು ಮತ್ತು ಆತ್ಮಹತ್ಯೆಯ ಪ್ರಯತ್ನವನ್ನು ತಡೆಗಟ್ಟಬಹುದು.

ಪರೀಕ್ಷೆಯಲ್ಲಿ ಕಡಿಮೆ ಅಂಕ, ಪ್ರೀತಿಯಲ್ಲಿ ವೈಫಲ್ಯ, ವ್ಯವಹಾರದಲ್ಲಿ ನಷ್ಟ ಮತ್ತು ವಿಫಲತೆ, ದೀರ್ಘಕಾಲಿಕ ಅನಾರೋಗ್ಯ, ಅವಮಾನ, ಸಾಮಾಜಿಕ ಬಾಂಧವ್ಯಗಳಲ್ಲಿ ಬಿರುಕು, ನಿರಾಸೆ, ದುಃಖ ಮುಂತಾದವುಗಳು ಜೀವನದಲ್ಲಿ ಸಾಮಾನ್ಯವಾಗಿ ಎದುರಾಗುವುದು ಸಹಜ ಎಂಬುದನ್ನು ಆತ್ಮಹತ್ಯೆಗೆ ಪ್ರಯತ್ನಿಸುವ ವ್ಯಕ್ತಿಗಳಿಗೆ ಅರ್ಥಮಾಡಿಸಬೇಕು.

ಈ ರೀತಿಯ ತಾತ್ಕಾಲಿಕ ಸಮಸ್ಯೆಗಳು ಎದುರಾದಾಗ ತೀವ್ರ ಒತ್ತಡಕ್ಕೆ ಒಳಗಾಗಿ ಜೀವವನ್ನು ಕಳೆದುಕೊಳ್ಳುವಂತಹ ಆತುರದ ನಿರ್ಧಾರವನ್ನು ಮಾಡಬಾರದು. ಸಮಸ್ಯೆಗಳನ್ನು ತಾಳ್ಮೆಯಿಂದ ಪರಿಶೀಲಿಸಿ ಪರಿಹರಿಸಿಕೊಳ್ಳುವ ಪ್ರಯತ್ನ ಮಾಡಬೇಕು. ಜೀವನದಲ್ಲಿ ಎದುರಾಗುವ ಯಾವುದೇ ಕಠಿಣ ಪರಿಸ್ಥಿತಿ ಅಥವಾ ಸಮಸ್ಯೆಗಳು ತಾತ್ಕಾಲಿಕವಾಗಿರುತ್ತವೆ ಹೊರತು ಜೀವನಪೂರ್ತಿ ಇರುವುದಿಲ್ಲ. ಕಾಲ ಬದಲಾದಂತೆ ಪರಿಸ್ಥಿತಿಯೂ ಬದಲಾಗುತ್ತದೆ ಮತ್ತು ಸಮಸ್ಯೆಗಳು ಪರಿಹಾರವಾಗುತ್ತವೆ ಎಂಬ ಅರಿವು ಮೂಡಿಸುವುದರಿಂದ ಆತ್ಮಹತ್ಯೆ ಪ್ರಯತ್ನವನ್ನು ತಡೆಯಬಹುದು.

ಆತ್ಮಹತ್ಯೆಯ ಬಗ್ಗೆ ಆಲೋಚಿಸುವ ವ್ಯಕ್ತಿಗಳು ಜೀವನದಲ್ಲಿ ಎದುರಾಗುವ ಸಮಸ್ಯೆಗಳಿಂದ ಹೊರಬರಲು ಬೇರೆ ದಾರಿಯೇ ಇಲ್ಲ ಎಂದು ತಪ್ಪಾಗಿ ಭಾವಿಸಿ ಆತ್ಮಹತ್ಯೆಯಂತಹ ಅವಿವೇಕದ ನಿರ್ಧಾರ ಕೈಗೊಳ್ಳಲು ಪ್ರಯತ್ನಿಸುತ್ತಾರೆ. ಇವರಲ್ಲಿ ಸಮಸ್ಯೆ ಪರಿಹರಿಸುವ ಕೌಶಲದ ಕೊರತೆ ಇರಬಹುದು.

ಆದಕಾರಣ ಸಮಸ್ಯೆ ಪರಿಹರಿಸುವ ಕೌಶಲಗಳನ್ನು ಕಲಿಸುವುದರಿಂದ ಜೀವನದಲ್ಲಿ ಎದುರಾಗುವ ಸಮಸ್ಯೆಗಳನ್ನು ಸಮರ್ಥವಾಗಿ ಎದುರಿಸಿ ಪರಿಹರಿಸಿಕೊಳ್ಳಲು ಸಾಧ್ಯವಾಗುತ್ತದೆ. ಕಠಿಣ ಪರಿಸ್ಥಿತಿ ಅಥವಾ ಸಮಸ್ಯೆ ಎದುರಾದಾಗ ಗಾಬರಿಗೊಳ್ಳದೆ, ಸಮಸ್ಯೆಯ ಮೂಲವನ್ನು ಅರ್ಥಮಾಡಿಕೊಂಡು, ಪರಿಹಾರದ ಮಾರ್ಗಗಳನ್ನು ಆಲೋಚಿಸಿ ಅವುಗಳನ್ನು ಕಾರ್ಯಗತಗೊಳಿಸುವ ಮೂಲಕ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಬಹುದು. ಹೀಗೆ ಸಮಸ್ಯೆ ಪರಿಹರಿಸುವ ಕೌಶಲ ಕಲಿಸುವುದರಿಂದ ಆತ್ಮಹತ್ಯೆ ಪ್ರಯತ್ನವನ್ನು ತಡೆಗಟ್ಟಬಹುದು.

ಜೀವನದಲ್ಲಿ ಕಠಿಣ ಪರಿಸ್ಥಿತಿಗಳು, ನೋವು, ದುಃಖ ಮತ್ತು ಸವಾಲುಗಳು ಎದುರಾದಾಗ ಮಾನಸಿಕ ಒತ್ತಡಕ್ಕೆ ಒಳಗಾಗಿ ಆತ್ಮವಿಶ್ವಾಸವನ್ನು ಕಳೆದುಕೊಂಡು ಆತ್ಮಹತ್ಯೆಯಂತಹ ಪ್ರಯತ್ನಕ್ಕೆ ಮುಂದಾಗಬಾರದು. ಮನಸ್ಸಿನಲ್ಲಿರುವ ನೋವು, ಹತಾಶೆ, ಆತಂಕ ಮತ್ತು ಸಮಸ್ಯೆಗಳನ್ನು ಆತ್ಮೀಯರು, ಕುಟುಂಬದವರು ಹಾಗೂ ನಂಬಿಕಸ್ಥರೊಂದಿಗೆ ಮುಕ್ತವಾಗಿ ಹಂಚಿಕೊಳ್ಳುವುದರಿಂದ ಮನಸ್ಸು ಹಗುರವಾಗುತ್ತದೆ. ಆತ್ಮೀಯರಿಂದ ಮಾನಸಿಕ ಬೆಂಬಲ ಮತ್ತು ಸಹಕಾರ ದೊರೆಯುವುದರಿಂದ ಸಮಸ್ಯೆಗೆ ಸೂಕ್ತ ಪರಿಹಾರ ಸಿಗಬಹುದು. ಇದರಿಂದ ಆತ್ಮಹತ್ಯೆ ಆಲೋಚನೆಯಿಂದ ದೂರವಾಗಲು ಸಹಾಯವಾಗುತ್ತದೆ.

ಜೀವನದ ಸವಾಲುಗಳು ಮತ್ತು ಪರಿಸ್ಥಿತಿಗಳನ್ನು ಒಳ್ಳೆಯ ದೃಷ್ಟಿಯಿಂದ ನೋಡುವಂತಹ ಸಕಾರಾತ್ಮಕ ಆಲೋಚನೆಗಳನ್ನು ಬೆಳೆಸಿಕೊಳ್ಳುವುದರಿಂದ ಆತ್ಮಹತ್ಯೆಯನ್ನು ತಡೆಗಟ್ಟಬಹುದು. ಕಠಿಣ ಪರಿಸ್ಥಿತಿಗಳಲ್ಲಿ ನಕಾರಾತ್ಮಕ ಆಲೋಚನೆಗಳ ಪರಿಣಾಮವಾಗಿ ಭಯ, ಅನಿಶ್ಚಿತತೆ, ಆತಂಕ, ಅಪನಂಬಿಕೆ ಮತ್ತು ಗೊಂದಲ ಉಂಟಾಗಿ ಆತ್ಮವಿಶ್ವಾಸ ಕುಗ್ಗುತ್ತದೆ. ಇದರಿಂದ ಬದುಕಿನ ಬಗ್ಗೆ ಭರವಸೆ ಕಡಿಮೆಯಾಗುತ್ತದೆ.

ಆದ್ದರಿಂದ ಬದುಕಿನ ಕಷ್ಟದ ಸಂದರ್ಭಗಳಲ್ಲಿ ಸಕಾರಾತ್ಮಕವಾಗಿ ಆಲೋಚಿಸಬೇಕು. ಜೀವನದಲ್ಲಿ ಎದುರಾಗಿರುವ ಕಷ್ಟಗಳು ಬದುಕನ್ನು ಬದಲಾಯಿಸಿಕೊಳ್ಳಲು ದೊರಕಿರುವ ಅವಕಾಶಗಳು, ನಾನು ಸಮಸ್ಯೆಯನ್ನು ಎದುರಿಸುತ್ತೇನೆ, ಭವಿಷ್ಯದಲ್ಲಿ ಒಳಿತಾಗಲು ಮುಂದೆ ಸಾಕಷ್ಟು ಅವಕಾಶಗಳಿವೆ ಎಂಬ ಆಶಾವಾದ ಮತ್ತು ಸಕಾರಾತ್ಮಕ ಆಲೋಚನೆಗಳನ್ನು ಅಳವಡಿಸಿಕೊಳ್ಳುವುದರಿಂದ ಆತ್ಮವಿಶ್ವಾಸ ಹೆಚ್ಚುವುದರೊಂದಿಗೆ ಬದುಕಿನ ಬಗ್ಗೆ ಭರವಸೆ ಮೂಡುತ್ತದೆ.

ಭಯ ಮನಸ್ಸಿನ ಶತ್ರು. ಭಯಗಳು ಮನಸ್ಸನ್ನು ದುರ್ಬಲಗೊಳಿಸಿ ಮಾನಸಿಕ ಖಿನ್ನತೆಗೆ ಕಾರಣವಾಗಬಹುದು. ಭಯ ಮನಸ್ಸನ್ನು ಆವರಿಸಿಕೊಂಡಾಗ ಆಲೋಚನಾ ಶಕ್ತಿ ಕುಂಠಿತಗೊಳ್ಳುತ್ತದೆ. ಇದರಿಂದ ವ್ಯಕ್ತಿ ಗೊಂದಲದ ಪರಿಸ್ಥಿತಿಯನ್ನು ಎದುರಿಸಬಹುದು ಮತ್ತು ತೀವ್ರ ಮಾನಸಿಕ ಭಯದಿಂದ ಆತ್ಮಹತ್ಯೆಯಂತಹ ತಪ್ಪು ನಿರ್ಧಾರ ಕೈಗೊಳ್ಳಲು ಪ್ರಯತ್ನಿಸಬಹುದು.

ಆದ್ದರಿಂದ ಜೀವನದಲ್ಲಿ ಭಯಮುಕ್ತ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕು. ಯಾವುದೇ ಸಮಸ್ಯೆಯ ಬಗ್ಗೆ ಅತಿಯಾದ ಭಯಪಡದೆ, ಮನಸ್ಸಿನಲ್ಲಿರುವ ಭಯವನ್ನು ಹೊರಹಾಕಿ ಧೈರ್ಯದಿಂದ ಜೀವನದಲ್ಲಿ ಹೆಜ್ಜೆ ಇಡುವುದನ್ನು ಕಲಿಯಬೇಕು.

ವ್ಯಕ್ತಿಯು ಏಕಾಂಗಿಯಾಗಿ ನಿರಂತರವಾಗಿ ಆಲೋಚಿಸುವುದರಿಂದ ಖಿನ್ನತೆಗೆ ಒಳಗಾಗಬಹುದು. ಇದು ಹಲವಾರು ನಕಾರಾತ್ಮಕ ಆಲೋಚನೆಗಳಿಗೆ ದಾರಿ ಮಾಡಿಕೊಡುತ್ತದೆ. ಆದ್ದರಿಂದ ಆತ್ಮಹತ್ಯೆಯಂತಹ ನಕಾರಾತ್ಮಕ ಆಲೋಚನೆಗಳಿಂದ ಹೊರಬರಲು ಧ್ಯಾನ, ಯೋಗ, ದೈಹಿಕ ವ್ಯಾಯಾಮ, ಸಂಗೀತ ಕೇಳುವುದು, ಹಾಡುವುದು, ಉತ್ತಮ ಸಾಹಿತ್ಯ ಓದುವುದು, ಆತ್ಮೀಯರೊಂದಿಗೆ ಹರಟೆ, ಮನರಂಜನೆ ಮುಂತಾದ ಸಕಾರಾತ್ಮಕ ಹವ್ಯಾಸಗಳಲ್ಲಿ ತೊಡಗಿಸಿಕೊಳ್ಳುವುದು ಉತ್ತಮ.

ಮಾನಸಿಕವಾಗಿ ಕುಗ್ಗಿರುವ, ಸಮಸ್ಯೆಯಿಂದ ಬಳಲುತ್ತಿರುವ ಹಾಗೂ ಜೀವನದಲ್ಲಿ ನಿರಂತರ ಸೋಲು ಮತ್ತು ನೋವುಗಳನ್ನು ಅನುಭವಿಸುತ್ತಿರುವ ವ್ಯಕ್ತಿಗಳು ಜೀವನದ ಬಗ್ಗೆ ಹತಾಶೆ ಹೊಂದಿ ಆತ್ಮಹತ್ಯೆಯ ಆಲೋಚನೆ ಮಾಡಬಹುದು. ಇಂತಹ ಸಮಯದಲ್ಲಿ ಕುಟುಂಬದ ಸದಸ್ಯರು ಮತ್ತು ಸ್ನೇಹಿತರು ಹತಾಶ ವ್ಯಕ್ತಿಯ ಸಮಸ್ಯೆಗಳನ್ನು ಕಿವಿಗೊಟ್ಟು ಆಲಿಸಬೇಕು ಹಾಗೂ ಧೈರ್ಯ ತುಂಬಬೇಕು. ಕಷ್ಟದ ಸನ್ನಿವೇಶದಲ್ಲಿ ಸಾಮಾಜಿಕ ಬೆಂಬಲ ದೊರೆಯುವುದರಿಂದ ಆತ್ಮಹತ್ಯೆಯ ಆಲೋಚನೆಗಳಿಂದ ಹೊರಬರಲು ಸಹಾಯವಾಗುತ್ತದೆ.

ಆತ್ಮಹತ್ಯೆ ಆಲೋಚನೆಗಳನ್ನು ತಡೆಗಟ್ಟಲು ಮನಃಶಾಸ್ತ್ರಜ್ಞರು ಮತ್ತು ಮನೋವೈದ್ಯರು ಹಲವಾರು ವಿಧಾನಗಳನ್ನು ಬಳಸುತ್ತಾರೆ. ಅವುಗಳಲ್ಲಿ ಆಪ್ತಸಲಹೆಯು ಪರಿಣಾಮಕಾರಿ ವಿಧಾನವಾಗಿದೆ. ಆತ್ಮಹತ್ಯೆ ಆಲೋಚನೆಗಳಿರುವ ವ್ಯಕ್ತಿಗಳಿಗೆ ಸರಿಯಾದ ಸಮಯದಲ್ಲಿ ಆಪ್ತಸಲಹೆ ಒದಗಿಸುವುದರಿಂದ ಆತ್ಮಹತ್ಯೆಯ ಪ್ರಯತ್ನವನ್ನು ಪರಿಣಾಮಕಾರಿಯಾಗಿ ತಡೆಗಟ್ಟಬಹುದು.

**-ಡಾ. ಸರ್ಮ್ಮ.ಎಸ್.**
ಮುಖ್ಯಸ್ಥರು
ಮನೋವಿಜ್ಞಾನ ಅಧ್ಯಯನ ಮತ್ತು ಸಂಶೋಧನಾ ವಿಭಾಗ
ಕರ್ನಾಟಕರಾಜ್ಯ ಮುಕ್ತ ವಿಶ್ವವಿದ್ಯಾನಿಲಯ
ಮುಕ್ತಗಂಗೋತ್ರಿ, ಮೈಸೂರು

ತುಂಗ ಬಿಂಬ

# ಗಣೇಶ ಹಬ್ಬದ ಆಚರಣೆ ಪರಿಸರ ಸ್ನೇಹಿಯಾಗಿರಲಿ

ಗಣೇಶ ಚತುರ್ಥಿ ಹಿಂದೂ ಧರ್ಮದ ಪ್ರಮುಖ ಹಬ್ಬಗಳಲ್ಲಿ ಒಂದಾಗಿದೆ. ಈ ಹಬ್ಬವನ್ನು ವಿಘ್ನನಿವಾರಕ, ಬುದ್ಧಿ ಮತ್ತು ವಿದ್ಯೆಯ ಅಧಿಪತಿಯಾದ ಶ್ರೀ ಗಣೇಶನ ಜನ್ಮವನ್ನು ಸ್ಮರಿಸುವುದರ ಜೊತೆಗೆ ಅತ್ಯಂತ ಭಕ್ತಿ. ಭಾವದಿಂದ ಆಚರಿಸಲಾಗುತ್ತದೆ. ಪ್ರತಿವರ್ಷ ಭಾದ್ರಪದ ಮಾಸದ ಶುಕ್ಲ ಪಕ್ಷದ ಚತುರ್ಥಿಯೆಂದು ಗಣೇಶ ಹಬ್ಬವನ್ನು ಆಚರಿಸಲಾಗುತ್ತದೆ. ಭಾರತದಲ್ಲಿ ಸಾರ್ವಜನಿಕ ಗಣೇಶೋತ್ಸವಕ್ಕೆ ವಿಶೇಷ ಮಹತ್ವವಿದೆ. 1892ರಲ್ಲಿ ಮಹಾರಾಷ್ಟ್ರದಲ್ಲಿ ಬಾವ ಸಾಹೇಬ್ ಲಕ್ಷ್ಮಣ ಜವೇಲ್ ಅವರು ಗಣೇಶೋತ್ಸವವನ್ನು ಸಾರ್ವಜನಿಕವಾಗಿ ಆಚರಿಸುವ ಪರಂಪರೆಯನ್ನು ಆರಂಭಿಸಿದರು. ಇದರ ಮೂಲಕ ಜನರಲ್ಲಿ ರಾಷ್ಟ್ರೀಯ ಏಕತೆ ಮತ್ತು ದೇಶಭಕ್ತಿ ಮೂಡಿತು. ಜನರು ತಮ್ಮ ಮನೆಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಗಣೇಶನ ಮೂರ್ತಿಯನ್ನು ಪ್ರತಿಷ್ಠಾಪಿಸಿ ಪೂಜೆ, ಭಜನೆ, ಸಾಂಸ್ಕೃತಿಕ ಕಾರ್ಯಕ್ರಮಗಳು, ಅನ್ನಸಂತರ್ಪಣೆ ಹಾಗೂ ಧಾರ್ಮಿಕ ಪ್ರವಚನಗಳನ್ನು ಆಯೋಜಿಸುತ್ತಾರೆ.

ಗಣೇಶೋತ್ಸವವು ಭಕ್ತಿ, ಐಕ್ಯತೆ, ಸಹೋದರತೆ ಮತ್ತು ಸಾಂಸ್ಕೃತಿಕ ಪರಂಪರೆ ಹಾಗೂ ರಾಷ್ಟ್ರೀಯ ಐಕ್ಯತೆಯನ್ನು ಬೆಳೆಸುವ ಹಬ್ಬವಾಗಿದೆ. ಪರಿಸರ ಸಂರಕ್ಷಣೆಯ ದೃಷ್ಟಿಯಿಂದ ಮಣ್ಣಿನ ಗಣೇಶ ಮೂರ್ತಿಗಳನ್ನು ಬಳಸುವುದು ಮತ್ತು ಪರಿಸರ ಸ್ನೇಹಿಯಾಗಿ ಈ ಹಬ್ಬವನ್ನು ಆಚರಿಸುವುದು ಇಂದು ಅತ್ಯವಶ್ಯಕವಾಗಿದೆ.

ಪರಿಸರ ಸ್ನೇಹಿ ಗಣೇಶೋತ್ಸವವನ್ನು ಆಚರಿಸಲು ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿಒಪಿ) ಮೂರ್ತಿಗಳ ಬದಲು ನೈಸರ್ಗಿಕ ಮಣ್ಣಿನಿಂದ ತಯಾರಿಸಿದ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪನೆ ಮಾಡಬೇಕು. ಇದು ನೀರಿನಲ್ಲಿ ಸುಲಭವಾಗಿ ಕರಗುತ್ತದೆ ಮತ್ತು ಪರಿಸರಕ್ಕೆ ಯಾವುದೇ ಹಾನಿಯಾಗುವುದಿಲ್ಲ. ರಾಸಾಯನಿಕ ಬಣ್ಣಗಳ ಬದಲಿಗೆ ಅರಿಶಿನ, ಕುಂಕುಮ ಮುಂತಾದ ನೈಸರ್ಗಿಕ ಬಣ್ಣಗಳಿಂದ ಅಲಂಕರಿಸಿದ ಗಣೇಶ ಮೂರ್ತಿಗಳನ್ನು ಮಾರುಕಟ್ಟೆಯಿಂದ ತರಬೇಕು. ಪ್ಲಾಸ್ಟಿಕ್ ಅಲಂಕಾರಗಳನ್ನು ಬಳಸದೆ, ಪರಿಸರ ಸ್ನೇಹಿ ಹೂವುಗಳು, ಎಲೆಗಳು, ಬಾಳೆ ಕಂಬ, ಮಾವಿನ ತೋರಣ, ಬಟ್ಟೆಯ ಅಲಂಕಾರ ಹಾಗೂ ಮರುಬಳಕೆ ಮಾಡಬಹುದಾದ ವಸ್ತುಗಳನ್ನು ಬಳಸಬೇಕು. ಶಬ್ದ ಮಾಲಿನ್ಯ ನಿಯಂತ್ರಿಸಬೇಕು. ಗಣೇಶ ಪ್ರತಿಷ್ಠಾಪನ ಸ್ಥಳದಲ್ಲಿ ಅತಿಯಾದ ಶಬ್ದದ ಡಿಜೆ, ಪಟಾಕಿ ಹಾಗೂ ಧ್ವನಿವರ್ಧಕಗಳ ಬಳಕೆಯನ್ನು ಕಡಿಮೆ ಮಾಡಿ, ಸಾರ್ವಜನಿಕರಿಗೆ ತೊಂದರೆಯಾಗದತೆ ಭಕ್ತಿಭಾವದಿಂದ ಗಣೇಶ ಹಬ್ಬವನ್ನು ಆಚರಿಸಬೇಕು.

ನೀರಿನ ಸಂರಕ್ಷಣೆ ಗಣೇಶ ವಿಸರ್ಜನೆಯನ್ನು ಮನೆಯಲ್ಲಿಯೇ ಅಥವಾ ಕೃತಕ ವಿಸರ್ಜನಾ ಕುಂಡಗಳಲ್ಲಿ ಮಾಡುವುದರಿಂದ ನದಿ, ಕೆರೆ ಹಾಗೂ ಇತರ ಜಲಮೂಲಗಳು ಮಾಲಿನ್ಯವಾಗುವುದನ್ನು ತಡೆಯಬಹುದು. ಪ್ಲಾಸ್ಟಿಕ್ ಬಳಕೆ ಬೇಡ ಒಮ್ಮೆ ಮಾತ್ರ ಬಳಸುವ ಪ್ಲಾಸ್ಟಿಕ್ ತಟ್ಟೆ, ಕಪ್ ಮತ್ತು



ಚೀಲಗಳ ಬದಲು ಎಲೆ ತಟ್ಟೆ, ತಾಮ್ರದ ಪಾತ್ರೆಗಳು ಅಥವಾ ಬಟ್ಟೆಯ ಚೀಲಗಳನ್ನು ಬಳಸಬೇಕು. ಗಿಡ ನೆಡುವ ಸಂಕಲ್ಪ ಗಣೇಶೋತ್ಸವದ ಅಂಗವಾಗಿ ಕುಟುಂಬದೊದಿಗೆ ಅಥವಾ ಸ್ನೇಹಿತರೊಂದಿಗೆ ಒಂದು ಗಿಡವನ್ನು ನೆಟ್ಟು ಅದರ ಆರೈಕೆಯ ಸಂಕಲ್ಪ ಮಾಡುವುದರ ಜೊತೆಗೆ ಪರಿಸರ ಉಳಿದರೆ ನಮ್ಮ ಭವಿಷ್ಯ ಉಳಿಯುತ್ತದೆ. ಮಣ್ಣಿನ ಗಣೇಶನನ್ನು ಕೂಡಿಸಿ ಪರಿಸರ ಸ್ನೇಹಿ ಗಣೇಶೋತ್ಸವ ಆಚರಿಸಿ. ಹಸಿರು ಭೂಮಿ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸೋಣ. ಎಂಬುದು ನಮ್ಮ ಸಂಕಲ್ಪವಾಗಬೇಕು.

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಈ ಹಬ್ಬದ ಆಚರಣೆಯಿಂದ ನೈಸರ್ಗಿಕ ಜಲ ಮೂಲಗಳನ್ನು ರಕ್ಷಿಸುವ ನಿಟ್ಟಿನಲ್ಲಿ 2016ರ ಜುಲೈ 20ರಂದು ಅಧಿಸೂಚನೆಯನ್ನು ಹೊರಡಿಸಿದ್ದು, ಪ್ಲಾಸ್ಟರ್ ಆಫ್ ಪ್ಯಾರಿಸ್ ಮತ್ತು ಬಣ್ಣ ಲೇಪಿತವಾದ ವಿಗ್ರಹಗಳನ್ನು ಇನ್ಮುಂದೆ ರಾಜ್ಯದ ಯಾವುದೇ ಕೆರೆ ಮತ್ತು ಇತರೇ ಜಲ ಮೂಲಗಳಲ್ಲಿ ವಿಸರ್ಜಿಸುವುದನ್ನು ನಿಷೇಧಿಸಲಾಗಿದೆ. ಸಾರ್ವಜನಿಕರು ಪರಿಸರ ಸ್ನೇಹಿ ಗೌರಿಗಣೇಶ ಹಬ್ಬ ಆಚರಿಸಿ ನೈಸರ್ಗಿಕ ಜಲ ಸಂಪನ್ಮೂಲಗಳನ್ನು ಸಂರಕ್ಷಿಸಬೇಕಿದೆ.

ಕೇದ್ರ ಮಾಲಿನ್ಯ ನಿಯಂತ್ರಣ ಮಂಡಳಿಯು ಪಿ.ಒ.ಪಿ ಯಿಂದ ಗಣೇಶ ಮೂರ್ತಿ ತಯಾರಿಸಿ, ಮಾರಾಟ ಹಾಗೂ ವಿಸರ್ಜನೆಗೆ ಸಂಬಧಿಸಿದತೆ ದಿನಾಂಕ: 12.05.2020 ರಂದು ಪರಿಷ್ಕೃತ ಮಾರ್ಗಸೂಚಿಯನ್ನು ಹೊರಡಿಸಿ, ನೀರಿನ ಮೂಲಗಳನ್ನು ಸಂರಕ್ಷಿಸುವ ದೃಷ್ಟಿಯಿಂದ ಪಿಒಪಿ ಮೂರ್ತಿಗಳ ತಯಾರಿಸಿ, ಮಾರಾಟ ಹಾಗೂ ವಿಸರ್ಜನೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿರುತ್ತದೆ.

ಜಲ (ಮಾಲಿನ್ಯ ನಿಯಂತ್ರಣ ಮತ್ತು ನಿವಾರಣಾ) ಕಾಯ್ದೆ, 1974ರ ಕಲಂ 33(ಎ) ಅಡಿಯಲ್ಲಿ ಈ ರೀತಿಯ ವಿಗ್ರಹಗಳ ಉತ್ಪಾದನಾ ಘಟಕವನ್ನು ಮುಚ್ಚುವ ಹಾಗೂ ಮುಟ್ಟುಗೋಲು ಹಾಕಿಕೊಳ್ಳುವ ಅವಕಾಶ ಇರುತ್ತದೆ. ಈ ವಿಗ್ರಹಗಳನ್ನು ಯಾವುದೇ ನೀರಿನ ಮೂಲಗಳಿಗೆ ವಿಸರ್ಜನೆ ಮಾಡುವುದು ಕಾಯ್ದೆಯ ಕಲಂ 24ರ ಸ್ಪಷ್ಟ ಉಲ್ಲಂಘನೆಯಾಗುತ್ತದೆ. ಈ ಕಾಯ್ದೆಯ ಕಲಂ 41 ಹಾಗೂ 43ರ ಪ್ರಕಾರ ಶಿಕ್ಷಾರ್ಹ ಅಪರಾಧವಾಗುತ್ತದೆ. ಈ ಅಪರಾಧಕ್ಕೆ ದಂಡದೊದಿಗೆ ಕನಿಷ್ಠ ಒಂದೂವರೆ ವರ್ಷ ಹಾಗೂ ಗರಿಷ್ಠ ಆರು ವರ್ಷಗಳ ಕಾರಾಗೃಹವಾಸದ ಜೊತೆಗೆ ಈ ಉಲ್ಲಂಘನೆಗೆ ಪರಿಸರ (ಸಂರಕ್ಷಣಾ) ಕಾಯ್ದೆ 1986 ರಡಿಯಲ್ಲಿಯೂ ಸಹ ಕ್ರಮ ಜರುಗಿಸಬಹುದಾಗಿರುತ್ತದೆ. ಅಂತಹ ಉದ್ದಿಮೆ ಅಥವಾ ಉತ್ಪಾದನಾ ಘಟಕವನ್ನು ಪರಿಸರ (ಸಂರಕ್ಷಣಾ) ಕಾಯ್ದೆ, 1986 ಕಲಂ 5 ರಡಿಯಲ್ಲಿ ಮುಚ್ಚುವ ಹಾಗೂ ಮುಟ್ಟುಗೋಲು ಹಾಕಿಕೊಳ್ಳಬಹುದಾಗಿದೆ. ಈ ಕಾಯ್ದೆಯ ಉಲ್ಲಂಘನೆ ಕಲಂ 15ರ ಪ್ರಕಾರ ಶಿಕ್ಷಾರ್ಹ ಅಪರಾಧವಾಗಿದ್ದು, ಅದಕ್ಕೆ ಗರಿಷ್ಠ ಒಂದು ಲಕ್ಷ ರೂಪಾಯಿಗಳ ದಂಡದೊದಿಗೆ ಗರಿಷ್ಠ 5 ವರ್ಷದ ಕಾರಾಗೃಹವಾಸದ ಶಿಕ್ಷೆಗೆ ಒಳಪಡಬೇಕಾಗುತ್ತದೆ.

ಗಣೇಶ ಹಬ್ಬವನ್ನು ಪರಿಸರ ಸ್ನೇಹಿಯಾಗಿ ಮಣ್ಣಿನಿಂದ ತೈಯಾರಿಸಿದ ಗಣಪತಿಗಳನ್ನು ನಮ್ಮ ಮನೆಗಳಲ್ಲಿ ಪ್ರತಿಷ್ಠಾಪನೆ ಮಾಡಿ ಆಚರಿಸೋಣ. ರಾಸಾಯನಿಕ ಬಣ್ಣಗಳಿಂದ ತೈಯಾರಿಸಿದ ಗಣಪತಿಗಳನ್ನು ಬಳಸಿದರೆ ಅವುಗಳನ್ನು ನದಿ, ಭಾವಿ, ಹಳ್ಳ ಮತ್ತು ಕೆರೆ ಇತ್ಯಾದಿಗಳಲ್ಲಿ ವಿಸರ್ಜಿಸಿದಾಗ ಈ ವಿಗ್ರಹಗಳ ಮೂಲವಸ್ತು ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿಒಪಿ) ಇದರ ರಾಸಾಯನಿಕ ಮೂಲ ಹೆಸರು "ಕ್ಯಾಲ್ಸಿಯಮ್ ಸಲ್ಫೇಟ್ ಹೆಮಿಹೈಡ್ರೇಟ್" ಇದರಿಂದ ತೈಯಾರಿಸಿದ ವಿಗ್ರಹಗಳನ್ನು ನೀರಿನಲ್ಲಿ ವಿಸರ್ಜಿಸಿದಾಗ, ಅವುಗಳು ನೀರಿನಲ್ಲಿ ನಿಧಾನವಾಗಿ ಕರಗುವುದರಿಂದ ನೀರಿನಲ್ಲಿನ ಕರಗಿದ ಆಮ್ಲಜನಕದ ಪ್ರಮಾಣದಲ್ಲಿ ತೀವ್ರ ಇಳಿಕೆಯಾಗುತ್ತೆ ಹಾಗೂ ಅದರಲ್ಲಿ ಕ್ಯಾಲ್ಸಿಯಂ ಅಂಶ ಇರುವುದರಿಂದ ನೀರಿನ ಶಾಶ್ವತ ಗಡಸುತನ ಸಹ ಹೆಚ್ಚಾಗುತ್ತದೆ. ವಿಗ್ರಹಗಳಲ್ಲಿ ಉಪಯೋಗಿಸಲಾದ ರಾಸಾಯನಿಕ ಯುಕ್ತ ಬಣ್ಣಗಳಲ್ಲಿರುವ ಭಾರಲೋಹಗಳಾದ ಮರ್ಕ್ಯುರಿ, ಆರ್ಸೆನಿಕ್, ಲೆಡ್, ಕ್ರೋಮಿಯಂ, ತಾಮ್ರ, ಕ್ಯಾಡ್ಮಿಯಂ, ಕೋಬಾಲ್ಟ್, ಸತು ಇತ್ಯಾದಿ ಹಾನಿಕಾರಕ ವಸ್ತುಗಳು ಕ್ರಮೇಣ ನೀರಿನಲ್ಲಿ ಬೆರೆತು ನೀರಿನ ಮೂಲಗಳು ಕಲುಷಿತವಾಗುತ್ತವೆ. ಅಲ್ಲದೆ, ನೀರಿನಲ್ಲಿನ ವಿವಿಧ ಜೀವಿಗಳಾದ ಮೀನುಗಳು ಹಾಗು ಇತರೆ ಜಲಚರಗಳು ಸಾವನ್ನಪ್ಪುವ ಸಂಭವವಿರುತ್ತದೆ. ಈ ನೀರನ್ನು ಬಳಸುವಂತಹ ಸುತ್ತಮುತ್ತಲಿನ ಜನರು ಹಾಗು ಜಾನುವಾರುಗಳಿಗೆ ವಿವಿಧ ರೀತಿಯ ಕಾಯಿಲೆಗಳು ಮತ್ತು ಕ್ಯಾನ್ಸರ್ ಕಾರಕವಾಗುವಂತಹ ಇತರೆ ರೋಗರುಜಿನಗಳು ಬರುವ ಸಾಧ್ಯತೆಯಿರುತ್ತವೆ ಎಂದು ಹಲವಾರು ವಿಶ್ಲೇಷಣೆ ಮತ್ತು ಅಧ್ಯಯನಗಳು ಹೇಳುತ್ತವೆ.

ಜಿಲ್ಲಾಡಳಿತ, ಪೊಲೀಸ್ ಇಲಾಖೆ ಸೇರಿದಂತೆ ಸಂಬಧಿಸಿದ ವಿವಿಧ ಇಲಾಖೆಗಳ ಸಹಯೋಗದಲ್ಲಿ ಗಣೇಶ ಹಬ್ಬವನ್ನು ಶಾಂತಿಯುತವಾಗಿ ಆಚರಿಸುವ ಕುರಿತು ಈಗಾಗಲೇ ಗಣೇಶ ಮಂಡಳಿಯ ಸದಸ್ಯರು ಹಾಗೂ ಸಾರ್ವಜನಿಕರೊಂದಿಗೆ ಪೂರ್ವಭಾವಿ ಸಭೆಗಳನ್ನು ಮಾಡಿ ಮಾಹಿತಿ ನೀಡುವುದರ ಜೊತೆಗೆ ಪತ್ರಿಕಾ ಪ್ರಕಟಣೆ ಮೂಲಕವು ಸರಕಾರದ ಮಾರ್ಗಸೂಚಿಗಳನ್ವಯ ಗಣೇಶ ಹಬ್ಬಗಳನ್ನು ಆಚರಿಸಲು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ. ಸರ್ಕಾರದ ಮಾರ್ಗಸೂಚಿಗಳು ಸಾರ್ವಜನಿಕರ ಒಳಿತಿಗಾಗಿಯೆ ಇರುವುದರಿಂದ ಅವುಗಳನ್ನು ಪಾಲನೆ ಮಾಡುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ನಮ್ಮ ಸಂತೋಷ ಇತರರಿಗೆ ನೋವುಂಟು ಮಾಡಬಾರದು. ಎಕೆಂದರೆ ಗಣೇಶ ಪ್ರತಿಷ್ಠಾಪನೆ ಸ್ಥಳದ ಅಕ್ಕಪಕ್ಕದ ಮನೆಗಳಲ್ಲಿ ವೃದ್ಧರು, ರೋಗಿಗಳು, ಗರ್ಭಿಣಿ ಮಹಿಳೆಯರು, ಚಿಕ್ಕ ಮಕ್ಕಳು ಇರುವ ಸಾಧ್ಯತೆ ಇರುವುದರಿಂದ ಹೆಚ್ಚಿನ ಶಬ್ದವಿಟ್ಟು ಧ್ವನಿವರ್ದಕಗಳನ್ನು ಬಳಸಬಾರದು. ಇದ್ದರಿಂದ ಅವರಿಗೆ ತೊಂದರೆಯಾಗುತ್ತದೆ.

ಈ ವರ್ಷ ಮಳೆ ಕಡಿಮೆ ಆಗಿರುವುದರಿಂದ ಭಾವಿ, ಕೆರೆ ಹಾಗೂ ಹಳ್ಳ-ಕೊಳ್ಳಗಳಲ್ಲಿ ನೀರು ಕಡಿಮೆ ಪ್ರಮಾಣದಲ್ಲಿ ಇರುವುದರಿಂದ ಆ ನೀರು ಕಲುಷಿತವಾದರೆ ಪ್ರಾಣಿ-ಪಕ್ಷಿಗಳಿಗೂ ಕುಡಿಯಲು ಯೋಗ್ಯವಾಗದ ನೀರಾಗುತ್ತದೆ ಹಾಗಾಗಿ ನಾವು ನೀರಿನ ಸಂರಕ್ಷಣೆ ಜೊತೆಗೆ ಪರಿಸರ ಸ್ನೇಹಿಯಾಗಿ ಈ ವರ್ಷದ ಗಣೇಶ ಹಬ್ಬವನ್ನು ಶಾಂತಿ ಹಾಗೂ ಸೌಹಾರ್ದತೆಯಿಂದ ಆಚರಿಸುವ ಮೂಲಕ ಮೋದಕ ಪ್ರೀಯ ಗೌರಿ ಗಣೇಶನ ಪ್ರೀತಿಗೆ ನಾವೆಲ್ಲರೂ ಪಾತ್ರರಾಗೋಣ.

**-ಡಾ.ಸುರೇಶ ಜಿ.**
ಹಿರಿಯ ಸಹಾಯಕ
ನಿರ್ದೇಶಕರು,
ವಾರ್ತಾ ಮತ್ತು ಸಾರ್ವಜನಿಕ
ಸಂಪರ್ಕ ಇಲಾಖೆ,
ರಾಯಚೂರು.



ತುಂಗ ಬಿಂಬ

# ಜಿಲ್ಲಾ ಕಾರಾಗೃಹದಲ್ಲಿ ಬಂಧಿಗಳಿಗೆ ಆರೋಗ್ಯ ತಪಾಸಣಾ ಶಿಬಿರ: 200ಕ್ಕೂ ಹೆಚ್ಚು ಜನರ ತಪಾಸಣೆ



ರಾಯಚೂರು: ಹುಟ್ಟಿನಿಂದ ಯಾರೂ ಅಪರಾಧಿಗಳಾಗುವುದಿಲ್ಲ. ಜೀವನದಲ್ಲಿ ಎದುರಾಗುವ ಕೆಲವು ಘಟನೆಗಳು ವ್ಯಕ್ತಿಯನ್ನು ತಪ್ಪು ದಾರಿಗೆ ಕೊಂಡೊಯ್ಯಬಹುದು. ಅಂತಹ ಸಂದರ್ಭಗಳಲ್ಲಿ ಸಂಯಮ, ಶಾಂತತೆ ಹಾಗೂ ಹಿರಿಯರ ಮಾರ್ಗದರ್ಶನದಿಂದ ಸಮಾಜಮುಖಿ ಜೀವನ ನಡೆಸಲು ಸಾಧ್ಯ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ನಂದಿತಾ ಎಂ.ಎನ್. ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಬಂಧಿಖಾನೆ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕಾರಾಗೃಹ ಹಾಗೂ ರಿಮ್ಸ್ ಸಹಯೋಗದಲ್ಲಿ ಆಯೋಜಿಸಿದ್ದ ಬಂಧಿಗಳ ಆರೋಗ್ಯ ತಪಾಸಣಾ ಶಿಬಿರದಲ್ಲಿ ಮಾತನಾಡಿದ ಅವರು, ರಕ್ತದೊತ್ತಡ, ಮಧುಮೇಹ, ದಂತ ಹಾಗೂ ನೇತ್ರ ಸಮಸ್ಯೆಗಳ ಪತ್ತೆ ಜೊತೆಗೆ ಮಾನಸಿಕ ಆರೋಗ್ಯ ತಪಾಸಣೆ ಮತ್ತು ಆಪ್ತ ಸಮಾಲೋಚನೆಯ ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಕಾರಾಗೃಹ ಅಧೀಕ್ಷಕಿ ಅನಿತಾ ಹಿರೇಮನಿ ಮಾತನಾಡಿ, ಬಂಧಿಗಳು ತಮ್ಮ ಆರೋಗ್ಯ ಸಮಸ್ಯೆಗಳನ್ನು ತಜ್ಞ ವೈದ್ಯರೊಂದಿಗೆ ಮುಕ್ತವಾಗಿ ಹಂಚಿಕೊಂಡು ತಪಾಸಣೆ ಮಾಡಿಸಿಕೊಳ್ಳಬೇಕು. ಅಗತ್ಯವಿರುವವರಿಗೆ ನಿಯಮಾನುಸಾರ ಹೆಚ್ಚಿನ ಚಿಕಿತ್ಸೆ ಒದಗಿಸಲಾಗುವುದು ಎಂದರು.

ವಿಶ್ವ ಆತ್ಮಹತ್ಯೆ ತಡೆ ದಿನದ ಅಂಗವಾಗಿ ಮನೋರೋಗ ತಜ್ಞ ಡಾ. ಮನೋಹರ ಪತ್ತಾರ ಮಾತನಾಡಿ, ದುಃಖ, ಹತಾಶೆ, ಆವೇಶ, ಕೋಪ ಹಾಗೂ ವ್ಯಸನದಂತಹ ಸಂದರ್ಭಗಳನ್ನು ಸಮಾಧಾನದಿಂದ ಎದುರಿಸಬೇಕು. ಆತ್ಮಹತ್ಯೆಯಂತಹ ದುಡುಕಿನ ನಿರ್ಧಾರ ಕೈಗೊಳ್ಳಬಾರದು ಎಂದು ಸಲಹೆ ನೀಡಿದರು.

ಶಿಬಿರದಲ್ಲಿ 200ಕ್ಕೂ ಹೆಚ್ಚು ಜನರ ಆರೋಗ್ಯ ತಪಾಸಣೆ ನಡೆಸಲಾಯಿತು. 24 ಮಂದಿಗೆ ನೇತ್ರ ತಪಾಸಣೆ, 32 ಮಂದಿಗೆ ದಂತ ತಪಾಸಣೆ, 70 ಮಂದಿಗೆ ಮಧುಮೇಹ ಮತ್ತು ರಕ್ತದೊತ್ತಡ ಹಾಗೂ 31 ಮಂದಿಗೆ ಸಾಮಾನ್ಯ ಆರೋಗ್ಯ ತಪಾಸಣೆ ನಡೆಸಲಾಯಿತು.

ತಾಲೂಕು ಆರೋಗ್ಯಾಧಿಕಾರಿ ಡಾ. ಸತೀಶ್, ಡಾ. ಶೀತಲ್, ಡಾ. ಭಾಷಿತ್ ಲತೀಫ್, ಡಾ. ನವೀನ್, ಕಾರಾಗೃಹ ವೈದ್ಯ ಡಾ. ರಾಜಕುಮಾರ್, ಡಾ. ಮಂಜುಳಾ, ಜೈಲರ್ ಐ.ಎಸ್. ಹಿರೇಮಠ, ಈಶ್ವರ ಎಚ್. ದಾಸಪ್ಪನವರ, ಬಸಯ್ಯ, ಪುಂಡಲೀಕ ಗಂಜಿ ಸೇರಿದಂತೆ ಆರೋಗ್ಯ ಮತ್ತು ಕಾರಾಗೃಹ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

# ಮಂತ್ರಾಲಯ ಮಠ ಹಾಗೂ ಪೀಠಾಧಿಪತಿಗಳ ವಿರುದ್ಧ ಅವಹೇಳನ ಆರೋಪ: ಸಂಬಂಧಪಟ್ಟವರ ವಿರುದ್ಧ ಕ್ರಮಕ್ಕೆ ಆಗ್ರಹ



ರಾಯಚೂರು: ಸುಕ್ಷೇತ್ರ ಮಂತ್ರಾಲಯ ಹಾಗೂ ಮಂತ್ರಾಲಯ ಮಠದ ಪೀಠಾಧಿಪತಿ ಶ್ರೀ ಸುಬುಧೇಂದ್ರ ತೀರ್ಥರ ವಿರುದ್ಧ ಸಾಮಾಜಿಕ ಜಾಲತಾಣಗಳಲ್ಲಿ ಅವಹೇಳನಕಾರಿ ಹೇಳಿಕೆಗಳನ್ನು ಹರಡಲಾಗುತ್ತಿದೆ ಎಂದು ಆರೋಪಿಸಿ, ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಕೈಗೊಂಡು ಗಡಿಪಾರು ಮಾಡಬೇಕು ಎಂದು ಸಚಿನ್ ಖಾನಾಪುರ ಸೇರಿದಂತೆ ಹಲವರು ಆಗ್ರಹಿಸಿದ್ದಾರೆ.

ಈ ಕುರಿತು ಸಲ್ಲಿಸಿರುವ ಮನವಿಯಲ್ಲಿ, ರಾಯಚೂರು ತಾಲೂಕಿನ ಗಿಲ್ಲೇಸೂಗೂರು ಹೋಬಳಿಯ ಎಲೆಬಿಚ್ಚಾಲಿ ಗ್ರಾಮದ ಅಂಗಡಿ ವೀರೇಶ ಹಾಗೂ ಅವರ ಸಹಚರರು ಎಂದು ಉಲ್ಲೇಖಿಸಿರುವ ಕೆಲವರು, ಮಂತ್ರಾಲಯ ಮಠ ಹಾಗೂ ಪೀಠಾಧಿಪತಿಗಳ ವಿರುದ್ಧ ಅಪಪ್ರಚಾರ ನಡೆಸುತ್ತಿದ್ದಾರೆ ಎಂದು ಆರೋಪಿಸಲಾಗಿದೆ.

ಎಲೆಬಿಚ್ಚಾಲಿ ಗ್ರಾಮದ ಸರ್ವೆ ನಂ.35 ಹಾಗೂ 37ಕ್ಕೆ ಸಂಬಂಧಿಸಿದ ಒಟ್ಟು 2 ಎಕರೆ 33 ಗುಂಟೆ ಜಮೀನಿನ ಕುರಿತು ಸರ್ಕಾರದ ನಿಯಮಾವಳಿಯಂತೆ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, ಮೈಸೂರು ಜಿಲ್ಲೆ, ಮುಕ್ಕಾಂ ಮಂತ್ರಾಲಯದ ಪರವಾಗಿ ಆದೇಶ ಹೊರಡಿಸಲಾಗಿದೆ. ಅಲ್ಲದೆ, ಈ ವಿಚಾರಕ್ಕೆ ಸಂಬಂಧಿಸಿದಂತೆ ಕಲಬುರಗಿ ಹೈಕೋರ್ಟ್‌ನಲ್ಲಿ ನಡೆದ ರಿಟ್ ಅರ್ಜಿ ಪ್ರಕರಣಗಳಲ್ಲಿಯೂ ಮಠದ ಪರವಾಗಿ ತೀರ್ಪು ಬಂದಿದೆ ಎಂದು ಮನವಿದಾರರು ತಿಳಿಸಿದ್ದಾರೆ.

ಆದಾಗ್ಯೂ, ಜಾಗ ತಮ್ಮದೇ ಎಂದು ಹೇಳಿಕೊಂಡು ಗ್ರಾಮಸ್ಥರಲ್ಲಿ ತಪ್ಪು ಅಭಿಪ್ರಾಯ ಮೂಡಿಸುವುದು, ಜಾತಿ ಆಧಾರಿತವಾಗಿ ಜನರನ್ನು ಪ್ರಚೋದಿಸುವುದು ಹಾಗೂ ಮಠ ಮತ್ತು ಪೀಠಾಧಿಪತಿಗಳ ವಿರುದ್ಧ ಸಾಮಾಜಿಕ ಜಾಲತಾಣಗಳಲ್ಲಿ ವಿಡಿಯೋಗಳನ್ನು ಹರಡುವ ಕೆಲಸ ನಡೆಯುತ್ತಿದೆ ಎಂದು ಮನವಿಯಲ್ಲಿ ಆರೋಪಿಸಲಾಗಿದೆ.

ಗ್ರಾಮಗಳಲ್ಲಿ ಸಭೆಗಳನ್ನು ನಡೆಸಿ ಜನರನ್ನು ಪ್ರಚೋದಿಸಲಾಗುತ್ತಿದೆ ಹಾಗೂ ಮಠದ ಸಿಬ್ಬಂದಿ ಮತ್ತು ಬೆಂಬಲಿಗರಿಗೆ ಬೆದರಿಕೆಯ ವಾತಾವರಣ ಸೃಷ್ಟಿಸಲಾಗುತ್ತಿದೆ ಎಂಬ ಆರೋಪವನ್ನೂ ಮನವಿದಾರರು ಮಾಡಿದ್ದಾರೆ. ಇದರಿಂದ ಮಂತ್ರಾಲಯ ಹಾಗೂ ಬಿಚ್ಚಾಲಿಗೆ ಆಗಮಿಸುವ ಭಕ್ತರಲ್ಲಿ ಆತಂಕ ಉಂಟಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

ಬಿಚ್ಚಾಲಿ ಗ್ರಾಮದಲ್ಲಿ ಈ ಹಿಂದೆ ಚರ್ಚ್ ಹಾಗೂ ಆಂಜನೇಯ ಸ್ವಾಮಿ ವಿಗ್ರಹ ಪ್ರತಿಷ್ಠಾಪನೆ ವಿಚಾರವಾಗಿ ಉದ್ವಿಗ್ನ ಪರಿಸ್ಥಿತಿ ಉಂಟಾಗಿದ್ದು, ಈಗ ಪರಿಸ್ಥಿತಿ ಹತೋಟಿಗೆ ಬಂದಿರುವ ಸಂದರ್ಭದಲ್ಲಿ ಮತ್ತೊಮ್ಮೆ ಶಾಂತಿ ಕದಡುವ ಪ್ರಯತ್ನ ನಡೆಯಬಾರದು. ಆದ್ದರಿಂದ ಸಂಬಂಧಪಟ್ಟವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಂಡು, ಅಗತ್ಯವಿದ್ದಲ್ಲಿ ಗುಂಡಾ ಕಾಯ್ದೆಯಡಿ ಕ್ರಮ ಜರುಗಿಸಿ ಜಿಲ್ಲೆಯಿಂದ ಗಡಿಪಾರು ಮಾಡುವ ಮೂಲಕ ಗ್ರಾಮದಲ್ಲಿ ಶಾಂತಿ-ಸುವ್ಯವಸ್ಥೆ ಕಾಪಾಡಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಮನವಿಗೆ ಸಚಿನ್ ಖಾನಾಪುರ, ರವಿಕುಮಾರ, ಪುರುಷೋತ್ತಮ, ರಾಜು ಹಾಗೂ ಗೋವಿಂದರಾಜ ಸಹಿ ಮಾಡಿದ್ದಾರೆ.

# ಕಾನೂನು ಚೌಕಟ್ಟಿನೊಳಗೆ ಹಬ್ಬ ಆಚರಣೆ ಮಾಡಿ: ಎಸ್ ಪಿ




ಸಿರವಾರ : ಗಣೇಶ ಹಬ್ಬದಲ್ಲಿ ಗಣೇಶನ ಮಂಡಳಿ ಸದಸ್ಯರು ಮತ್ತು ಸಾರ್ವಜನಿಕರು ಯಾವುದೇ ರೀತಿಯ ಐತಕರ ಘಟನೆಗೆ ಆಸ್ಪದ ಕೊಡದೆ ಎಲ್ಲರೂ ಕಾನೂನಿನ ಚೌಕಟ್ಟಿನೊಳಗಡೆ ಹಬ್ಬವನ್ನು ಆಚರಿಸಬೇಕು ಸಾರ್ವಜನಿಕರಿಗೆ ಕಿರಿಕಿರಿ ಉಂಟು ಮಾಡುವ ಧ್ವನಿವರ್ಧಕಗಳನ್ನು ಬಳಸದೆ ನಮ್ಮ ಪೊಲೀಸ್ ಇಲಾಖೆ ನೀಡಿರುವ ನಿರ್ದೇಶನದಂತೆ ಗಣೇಶ್ ವಿಸರ್ಜನೆ ನರವೇರಿಸಬೇಕು ಒಂದು ವೇಳೆ ನಿಯಮ ಮೀರಿದರೆ ಅಂತವರ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಎಸ್ ಪಿ ಅರುಣಾಂಕ್ಷ ಗಿರಿ ಹೇಳಿದರು. ಅವರು ಬುಧವಾರ ಸಿರವಾರ ಪೊಲೀಸ್ ಠಾಣೆಯಲ್ಲಿ ಗಣೇಶ ಹಬ್ಬದ ನಿಮಿತ್ಯ ಶಾಂತಿ ಸಭೆಯಲ್ಲಿ ಭಾಗವಹಿಸಿದ್ದರು ಇದಕ್ಕೂ ಮುಂಚೆ ಮುಂಚೆ ಮಾತನಾಡಿದ ಡಿ ವೈ ಎಸ್ ಪಿ ಚಂದ್ರಶೇಖರ್ ನಾಯಕ ಅವರು ಗಣೇಶನ ಹಬ್ಬದ ನಿಮಿತ್ಯ ಜನರು ದುಂದು ವೆಚ್ಚಕ್ಕೆ ಹಾಕಬೇಕು ಈ ನಮ್ಮ ಭಾಗದಲ್ಲಿ ಹೆಚ್ಚಾಗಿ ರೈತಾಪಿ ವರ್ಗ ಮತ್ತು ರೈತರ ಮಕ್ಕಳೇ ಹೆಚ್ಚಿದ್ದಾರೆ ಈಗಾಗಲೇ ಸಕಾಲಕ್ಕೆ ಮಳೆ ಮತ್ತು ಬೆಳೆ ಇಲ್ಲದೆ ರೈತರ ಕಂಗಲಾಗಿದ್ದಾರೆ ಇಂಥ ಬರಗಾಲದ ಸಮಯದಲ್ಲಿ ಗಣೇಶ ಯುವಕ ಮಂಡಳಿಯವರು ಲಕ್ಷಾಂತರ ರೂಪಾಯಿ ಕುಡಿತ ಮತ್ತು ಡಿಜೆಗೆ ಇದರಿಂದ ಯಾವುದೇ ಪ್ರಯೋಜನವಿಲ್ಲ ನಮ್ಮ ನಾಡು ಬಸವಣ್ಣನ ನಾಡು ದಾಸೋಹದ ನಾಡು ಇಂಥ ನಾಡಲ್ಲಿ ಹಬ್ಬದ ನೆಪದಲ್ಲಿ ಬಡವರಿಗೆ ಅನ್ನದಾನ ಅನ್ನಸಂತರ್ಪಣೆ, ಮಾಡಿ ಗಣೇಶನ ಕೃಪೆಗೆ ಪಾತ್ರರಾಗಿ ಮತ್ತು ನಮ್ಮ ಸಂಪ್ರದಾಯ ಸಾಂಸ್ಕೃತಿ ಉಳಿಸುವ ಕಲಾ ತಂಡಗಳಿದ್ದಾವೆ ಅಂತವರನ್ನು ಪ್ರೋತ್ಸಾಹಿಸಿ ನಮ್ಮ ಸಂಸ್ಕೃತಿ ಉಳಿಸುವ ಕೆಲಸ ಮಾಡಿ ಎಂದರು.

ಈ ಸಂದರ್ಭದಲ್ಲಿ ತಹಸಿಲ್ದಾರ್ ಅಶೋಕ್ ಪವಾರ್, ಸಿಪಿಐ ಎಂ ಶಶಿಕಾಂತ್, ಪಿಎಸ್ಐ ಚಂದ್ರಶೇಖರ್ ಹಿರೇಮಠ, ಪಟ್ಟಣ ಪಂಚಾಯಿತಿ ಅಧಿಕಾರಿ ಹಂಪಯ್ಯ, ಜೆಸ್ಕಾಂ ಇಲಾಖೆ ಅಧಿಕಾರಿಗಳು,ಮತ್ತು ಪೊಲೀಸ್ ಸಿಬ್ಬಂದಿಗಳು ಸೇರಿದಂತೆ ವಿವಿಧ ಸಮುದಾಯದ ಮುಖಂಡರು ಗಣೇಶ ಯುವಕ ಮಂಡಳಿಯವರು ಇದ್ದರು.

# ರಾಜ್ಯ ಮಟ್ಟದ ಅನರ್ಘ್ಯ ರತ್ನ ಪ್ರಶಸ್ತಿಗೆ ಮಲ್ಲಿಕಾರ್ಜುನ ನಾಯಕ ಭಾಜನ



ದೇವದುರ್ಗ: ವಿಶ್ವ ಬಂಜಾರ ಕಲಾ ಸಾಹಿತ್ಯಕ ಸಂಘ (ರಿ.) ಅಮೀನಗಡ, ಬರಹವೇ ಶಕ್ತಿ ವೇದಿಕೆ ಹಾಗೂ ಚಿನ್ಮೂಲಾದ್ರಿ ಸಾಹಿತ್ಯ ವೇದಿಕೆ ಚಿತ್ರದುರ್ಗ ಸಂಯುಕ್ತಾಶ್ರಯದಲ್ಲಿ ನಡೆದ ಮೂರನೇ ಸಾಹಿತ್ಯೋತ್ಸವದಲ್ಲಿ ದೇವದುರ್ಗ ತಾಲೂಕಿನ ಬೂದಿನಾಳ ಗ್ರಾಮದ ಯುವಕವಿ, ಬರಹಗಾರ ಹಾಗೂ ರಿಮ್ಸ್ ಬೋಧಕ ಆಸ್ಪತ್ರೆಯ ಶುಶ್ರೂಷಕ ಅಧಿಕಾರಿ ಮಲ್ಲಿಕಾರ್ಜುನ ನಾಯಕ ಬೂದಿನಾಳ ಅವರಿಗೆ ರಾಜ್ಯ ಮಟ್ಟದ ಅನರ್ಘ್ಯ ರತ್ನ ಪ್ರಶಸ್ತಿ ಪ್ರದಾನ ಮಾಡಲಾಯಿತು. ಸಾಹಿತ್ಯ, ಸಾಮಾಜಿಕ ಸೇವೆ ಹಾಗೂ ವೈದ್ಯಕೀಯ ಆರೋಗ್ಯ ಸೇವೆಯಲ್ಲಿ ಸಲ್ಲಿಸಿರುವ ಸೇವೆಯನ್ನು ಪರಿಗಣಿಸಿ ಈ ಪ್ರಶಸ್ತಿ ನೀಡಲಾಗಿದೆ. ಪ್ರಶಸ್ತಿ ಸ್ವೀಕರಿಸಿದ ಮಲ್ಲಿಕಾರ್ಜುನ ನಾಯಕ ಅವರು ಸಂಘದ ಪದಾಧಿಕಾರಿಗಳು, ಗುರುಗಳು, ಬಂಧುಗಳು ಹಾಗೂ ಕವಿ ಮಿತ್ರರಿಗೆ ಕೃತಜ್ಞತೆ ಸಲ್ಲಿಸಿದರು. ಚಿತ್ರದುರ್ಗದ ಪತ್ರಿಕಾ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿವಿಧ ಮಠಾಧೀಶರು, ಸಾಹಿತ್ಯಾಸಕ್ತರು, ಹಿರಿಯ ಕವಿಗಳು ಹಾಗೂ ಪ್ರಶಸ್ತಿ ಪುರಸ್ಕೃತರು ಉಪಸ್ಥಿತರಿದ್ದರು.

# ಜಾಲಹಳ್ಳಿಯಲ್ಲಿ ಬಾಲಕಿಯರ ವಸತಿ ನಿಲಯ ನಿರ್ಮಾಣಕ್ಕೆ ಒತ್ತಾಯ



ಜಾಲಹಳ್ಳಿ, ಸೆ.9: ಜಾಲಹಳ್ಳಿ ಗ್ರಾಮದಲ್ಲಿ ಬಾಲಕಿಯರ ವಸತಿ ನಿಲಯ ನಿರ್ಮಾಣ ಸೇರಿದಂತೆ ವಿದ್ಯಾರ್ಥಿಗಳಿಗೆ ಅಗತ್ಯ ಶೈಕ್ಷಣಿಕ ಸೌಲಭ್ಯಗಳನ್ನು ಕಲ್ಪಿಸುವಂತೆ ಒತ್ತಾಯಿಸಿ ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಈರಪ್ಪ ಅರಕೇರ ಅವರು ದೇವದುರ್ಗ ಶಾಸಕಿ ಕರೆಮ್ಮ ಜಿ. ನಾಯಕ ಅವರಿಗೆ ಮನವಿ ಸಲ್ಲಿಸಿದರು.

ಜಾಲಹಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಬಡ ಮತ್ತು ಗ್ರಾಮೀಣ ವಿದ್ಯಾರ್ಥಿಗಳು ಶಿಕ್ಷಣಕ್ಕಾಗಿ ದೂರದ ಊರುಗಳಿಗೆ ತೆರಳಬೇಕಾದ ಪರಿಸ್ಥಿತಿ ಇದೆ. ಅದರಲ್ಲೂ ಬಾಲಕಿಯರಿಗೆ ಸುರಕ್ಷಿತ ವಸತಿ ಸೌಲಭ್ಯದ ಅಗತ್ಯವಿರುವುದರಿಂದ ಜಾಲಹಳ್ಳಿಯಲ್ಲಿ ಬಾಲಕಿಯರ ವಸತಿ ನಿಲಯ ನಿರ್ಮಿಸಲು ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಗ್ರಾಮದಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಿದ್ದು, ಶಿಕ್ಷಣ ಮುಂದುವರಿಸಲು ಅನುಕೂಲವಾಗುವಂತೆ ವಸತಿ ಹಾಗೂ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸಿದರೆ ವಿದ್ಯಾರ್ಥಿಗಳಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ಈರಪ್ಪ ಅರಕೇರ ಶಾಸಕರ ಗಮನಕ್ಕೆ ತಂದರು.

ಮನವಿ ಸ್ವೀಕರಿಸಿದ ಶಾಸಕಿ ಕರೆಮ್ಮ ಜಿ. ನಾಯಕ ಅವರು ವಿಷಯ ಪರಿಶೀಲಿಸಿ, ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಅಗತ್ಯ ಕ್ರಮ ಕೈಗೊಳ್ಳುವ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಸದಸ್ಯ ಅಬ್ದುಲ್ ರಹಿಮಾನ್, ಗ್ರಾಮದ ಹಿರಿಯ ಮುಖಂಡರಾದ ಶ್ರೀಧರ್ ದೇಸಾಯಿ, ಶಂಕರ್ ಗೌಡ ಮಾಲಿ ಪಾಟೀಲ್ ಹಾಗೂ ವೆಂಕಪ್ಪ ತೋಟದ ಉಪಸ್ಥಿತರಿದ್ದರು.

# ಕಾರ್ಮಿಕರಿಗೆ ₹66,800 ಪ್ರೋತ್ಸಾಹಧನ-ಎಕ್ಸ್‌ಗ್ರೇಷಿಯಾ ನೀಡಲು ಎಐಟಿಯುಸಿ ಒತ್ತಾಯ



ಹಟ್ಟಿ ಚಿನ್ನದ ಗಣಿ: ಹಟ್ಟಿ ಚಿನ್ನದ ಗಣಿ ಕಂಪನಿಯು 2025-26ನೇ ಸಾಲಿನಲ್ಲಿ ದಾಖಲೆಯ ಆರ್ಥಿಕ ಸಾಧನೆ ಮಾಡಿರುವ ಹಿನ್ನೆಲೆಯಲ್ಲಿ ಕಾರ್ಮಿಕರಿಗೆ ಉತ್ಪಾದನಾ ಪ್ರೋತ್ಸಾಹಧನ ಹಾಗೂ ಎಕ್ಸ್‌ಗ್ರೇಷಿಯಾ ಸೇರಿ ಒಟ್ಟು ₹66,800 ಪಾವತಿಸಬೇಕು ಎಂದು ಎಐಟಿಯುಸಿ ಹಟ್ಟಿ ಘಟಕ ಒತ್ತಾಯಿಸಿದೆ.

ಕಂಪನಿಯು 2025-26ನೇ ಆರ್ಥಿಕ ವರ್ಷದಲ್ಲಿ ಸುಮಾರು 6,49,690 ಮೆಟ್ರಿಕ್ ಟನ್ ಚಿನ್ನದ ಅದಿರು ಸಂಸ್ಕರಿಸಿ, 1,691.50 ಕೆಜಿ ಚಿನ್ನ ಉತ್ಪಾದನೆ ಮಾಡಿದ್ದು, ಸುಮಾರು ₹1,910 ಕೋಟಿ ವಹಿವಾಟು ನಡೆಸಿದೆ. ತೆರಿಗೆ ನಂತರದ ನಿವ್ವಳ ಲಾಭ ₹844 ಕೋಟಿ ಎಂದು ಘೋಷಿಸಲಾಗಿದ್ದು, ಅಂತಿಮ ಲೆಕ್ಕ ಪರಿಶೋಧನೆ ಪೂರ್ಣಗೊಂಡ ಬಳಿಕ ಇದು ಸುಮಾರು ₹870 ಕೋಟಿಗೆ ತಲುಪುವ ನಿರೀಕ್ಷೆಯಿದೆ ಎಂದು ಸಂಘಟನೆ ತಿಳಿಸಿದೆ.

2024-25ನೇ ಸಾಲಿನಲ್ಲಿ ಕಂಪನಿಯು ₹436 ಕೋಟಿ ತೆರಿಗೆ ನಂತರದ ನಿವ್ವಳ ಲಾಭ ಗಳಿಸಿತ್ತು. 2025-26ನೇ ಸಾಲಿನಲ್ಲಿ ಲಾಭ ದ್ವಿಗುಣಗೊಳ್ಳುವ ನಿರೀಕ್ಷೆಯಿದ್ದು, ಉತ್ಪಾದನೆ, ಮಾರಾಟ ಹಾಗೂ ಲಾಭದಲ್ಲಿ ಕಂಪನಿಯು ಗಮನಾರ್ಹ ಸಾಧನೆ ಮಾಡಿದೆ. ಈ ಯಶಸ್ಸಿಗೆ ಕಾರ್ಮಿಕರು ಮತ್ತು ಸಿಬ್ಬಂದಿಯ ಕಾರ್ಯದಕ್ಷತೆ ಪ್ರಮುಖ ಕಾರಣವಾಗಿದೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಹೆಚ್ಚುವರಿ ಯಂತ್ರೋಪಕರಣಗಳ ಬಳಕೆ ಅಥವಾ ಕಾರ್ಮಿಕರ ಸಂಖ್ಯೆಯಲ್ಲಿ ಹೆಚ್ಚಳವಿಲ್ಲದೆ, ಇರುವ ಸಂಪನ್ಮೂಲಗಳಲ್ಲೇ ಕಾರ್ಯಕ್ಷಮತೆಯನ್ನು ಹೆಚ್ಚಿಸಿ ಗುರಿ ಸಾಧಿಸಲಾಗಿದೆ. ಕಂಪನಿಯು ರಾಜ್ಯ ಸರ್ಕಾರಕ್ಕೆ ಲಾಭಾಂಶ, ಮುಖ್ಯಮಂತ್ರಿಗಳ ಪರಿಹಾರ ನಿಧಿ, ಜಿಲ್ಲಾ ಖನಿಜ ನಿಧಿ ಹಾಗೂ ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆ ಅಡಿಯಲ್ಲಿ ಹಣ ವಿನಿಯೋಗಿಸುತ್ತಿರುವಂತೆ, ಸಂಸ್ಥೆಯ ಪ್ರಗತಿಗೆ ಶ್ರಮಿಸುತ್ತಿರುವ ಕಾರ್ಮಿಕರಿಗೂ ನ್ಯಾಯಸಮ್ಮತವಾಗಿ ಪ್ರೋತ್ಸಾಹಧನ ನೀಡಬೇಕು ಎಂದು ಆಗ್ರಹಿಸಲಾಗಿದೆ.

ದಸರಾ ಹಬ್ಬ ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ 2025-26ನೇ ಸಾಲಿಗೆ ಉತ್ಪಾದನಾ ಪ್ರೋತ್ಸಾಹಧನ ₹50,000 ಹಾಗೂ ಎಕ್ಸ್‌ಗ್ರೇಷಿಯಾ ₹16,800 ಸೇರಿ ಒಟ್ಟು ₹66,800 ವಿತರಿಸುವ ಕುರಿತು ಮುಂಬರುವ ನಿರ್ದೇಶಕ ಮಂಡಳಿ ಸಭೆಯಲ್ಲಿ ತೀರ್ಮಾನ ಕೈಗೊಳ್ಳಬೇಕು ಎಂದು ಕಂಪನಿಯ ವ್ಯವಸ್ಥಾಪಕ ನಿರ್ದೇಶಕರಿಗೆ ಅವರ ಆಪ್ತ ಕಾರ್ಯದರ್ಶಿ ಹೆಚ್. ರಮೇಶ್ ಮೂಲಕ ಮನವಿ ಸಲ್ಲಿಸಲಾಯಿತು. ಕಾರ್ಯನಿರ್ವಾಹಕ ನಿರ್ದೇಶಕರಿಗೂ ಮನವಿ ನೀಡಲಾಯಿತು.

ಈ ಸಂದರ್ಭದಲ್ಲಿ ಎಐಟಿಯುಸಿ ಹಟ್ಟಿ ಘಟಕದ ಅಧ್ಯಕ್ಷ ನರಸಪ್ಪ ಬಾದರದಿನ್ನಿ, ಉಪಾಧ್ಯಕ್ಷರಾದ ತಿಪ್ಪಣ್ಣ ಮಾಚನೂರು, ನಾಗರೆಡ್ಡಿ ಜೀರಬಂಡಿ, ಸಲೀಂ ಪಾಷಾ, ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ್, ಕನಕರಾಜ್ ಗೌಡ ಗುರಿಕಾರ್, ಅಬ್ರಾಮ್, ಸೈಯದ್ ಯಾಸಿನ್, ದೇವರಾಜ್, ಗಂಗಪ್ಪ ಶಾಕೋದಿ, ಪೆಂಚಲಮ್ಮ, ಅಮೀರ್ ಪಾಷಾ, ಹನುಮಂತರಾಯ, ಉಮಾಪತಿ, ಕಿರಣ್ ಕುಮಾರ್ ಸೇರಿದಂತೆ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಮುನಿಯಪ್ಪ ಮುದ್ದಪ್ಪ ಪದವಿ ಮಹಾವಿದ್ಯಾಲಯದಲ್ಲಿ ಸ್ವಾಗತ ಹಾಗೂ ಬೀಳ್ಕೊಡುಗೆ ಸಮಾರಂಭ



ರಾಯಚೂರು: ಶ್ರೀ ಮಂಜುನಾಥ ಎಜುಕೇಶನ್ ಚಾರಿಟೇಬಲ್ ಟ್ರಸ್ಟ್ (ರಿ.), ರಾಯಚೂರು ಇವರ ಮುನಿಯಪ್ಪ ಮುದ್ದಪ್ಪ ಪದವಿ ಮಹಾವಿದ್ಯಾಲಯದಲ್ಲಿ ಬಿ.ಎ. ಮತ್ತು ಬಿ.ಕಾಂ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಸ್ವಾಗತ ಹಾಗೂ ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭವನ್ನು ಸೆ.9ರಂದು ಕನ್ನಡ ಭವನ ರಂಗಮಂದಿರದಹಿಂಭಾಗದಲ್ಲಿಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಶ್ರೀ ಷ.ಬ್ರ. ವೀರಸಂಗಮೇಶ್ವರ ಸ್ವಾಮೀಜಿಗಳು ದಿವ್ಯ ಸಾನ್ನಿಧ್ಯ ವಹಿಸಿದ್ದರು. ಕೆ. ಸಣ್ಣ ನರಸಿಂಹ ನಾಯಕ ಕಾರ್ಯಕ್ರಮವನ್ನು ಉದ್ಘಾಟಿಸಿ ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು. ಅಮರೇಶ್ ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ಅದನಗೌಡ ಪಾಟೀಲ ಮಾತನಾಡಿ, ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರ, ಶಿಸ್ತು ಹಾಗೂ ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸಿಕೊಳ್ಳಬೇಕು ಎಂದರು. ವಿಶೇಷ ಉಪನ್ಯಾಸಕರಾಗಿ ಭಾಗವಹಿಸಿದ್ದ ಡಾ. ಸಿದ್ಧಪ್ಪ ಜೇಗರ, ಉನ್ನತ ಶಿಕ್ಷಣವು ವ್ಯಕ್ತಿತ್ವ ವಿಕಸನ ಮತ್ತು ಉತ್ತಮ ಭವಿಷ್ಯ ನಿರ್ಮಾಣಕ್ಕೆ ಪ್ರಮುಖ ಆಧಾರವಾಗಿದ್ದು, ವಿದ್ಯಾರ್ಥಿಗಳು ಸ್ಪಷ್ಟ ಗುರಿಯೊಂದಿಗೆ ಪರಿಶ್ರಮಿಸಬೇಕು ಎಂದು ತಿಳಿಸಿದರು. ಮುಖ್ಯ ಅತಿಥಿಗಳಾಗಿ ಲಕ್ಷ್ಮೀದಲಪತಿ, ನಾರಾಯಣ ಸಾಹುಕಾರ ಹಾಗೂ ಡಾ. ಮಂಜುನಾಥ ಪಾಟೀಲ ವಟಗಲ್ ಭಾಗವಹಿಸಿ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು. ಸುನೀಲ ಸ್ವಾಮಿ ಆರ್.ಬಿ., ಶರಣಬಸವ ಪಾಟೀಲ, ಮಂಜುನಾಥ ಎನ್. ಹೊಸೂರ, ಪ್ರಾಂಶುಪಾಲ ಜಿ. ವೀರೇಶ ನಾಯಕ, ಎನ್‌ಎಸ್‌ಎಸ್ ಅಧಿಕಾರಿಗಳು, ಬೋಧಕ-ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಸಮಾರಂಭದಲ್ಲಿ ಪ್ರಥಮ ವರ್ಷದ ವಿದ್ಯಾರ್ಥಿಗಳನ್ನು ಆತ್ಮೀಯವಾಗಿ ಸ್ವಾಗತಿಸಿ, ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಶುಭಾಶಯ ಕೋರಿ ಅವರ ಮುಂದಿನ ಭವಿಷ್ಯಕ್ಕೆ ಹಾರೈಸಲಾಯಿತು.

# ಅಂತರ-ಕಾಲೇಜು ಸಂಸ್ಕೃತಿ ಪುನಶ್ಚೇತನ ಶಿಬಿರ: ವಿದ್ಯಾರ್ಥಿಗಳಿಗೆ ಜಿಲ್ಲಾ ಮಟ್ಟದ ಸ್ಪರ್ಧೆಗಳು



ಮಾನ್ವಿ: ಬೆಂಗಳೂರಿನ ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರದ ವತಿಯಿಂದ ಅಂತರ-ಕಾಲೇಜು ಸಂಸ್ಕೃತಿ ಪುನಶ್ಚೇತನ ಶಿಬಿರದ ಅಂಗವಾಗಿ ಪದವಿ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳಿಗಾಗಿ ಜಿಲ್ಲಾ ಮಟ್ಟದ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ ಎಂದು ಕೇಂದ್ರದ ಅಧ್ಯಕ್ಷ ಕಾ.ತ. ಚಿಕ್ಕಣ್ಣ ತಿಳಿಸಿದ್ದಾರೆ. ಶರಣ ಸಾಹಿತ್ಯ, ತತ್ವಪದ ಸಾಹಿತ್ಯ, ಕೀರ್ತನ ಸಾಹಿತ್ಯ ಹಾಗೂ ಅನುಭಾವ ಸಾಹಿತ್ಯ ವಿಷಯಗಳ ಕುರಿತು ಪ್ರಬಂಧ ರಚನೆ, ಓದು-ವ್ಯಾಖ್ಯಾನ ಮತ್ತು ವೈಚಾರಿಕ ಭಾಷಣ ಸ್ಪರ್ಧೆಗಳು ನಡೆಯಲಿವೆ. ಓದು-ವ್ಯಾಖ್ಯಾನ ಮತ್ತು ವೈಚಾರಿಕ ಭಾಷಣ ಸ್ಪರ್ಧೆಗಳು ಅ.6ರಂದು ಮಾನ್ವಿ ಪಟ್ಟಣದ ಬಾಷುಮಿಯಾ ಸಾಹುಕಾರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆಯಲಿವೆ. ಮೂರು ವಿಭಾಗಗಳಲ್ಲೂ ತಲಾ ಗರಿಷ್ಠ 15 ಅರ್ಹ ವಿದ್ಯಾರ್ಥಿಗಳನ್ನು ಬಹುಮಾನಕ್ಕೆ ಆಯ್ಕೆ ಮಾಡಲಾಗುವುದು. ಪ್ರಬಂಧ ಸ್ಪರ್ಧೆಯಲ್ಲಿ ತಲಾ ₹2,000, ಓದು-ವ್ಯಾಖ್ಯಾನ ಮತ್ತು ವೈಚಾರಿಕ ಭಾಷಣ ಸ್ಪರ್ಧೆಗಳಲ್ಲಿ ತಲಾ ₹1,000 ಬಹುಮಾನ ನೀಡಲಾಗುವುದು. ಅರ್ಜಿ ಸಲ್ಲಿಸಲು ಸೆ.25 ಕೊನೆಯ ದಿನವಾಗಿದ್ದು, ಪ್ರಬಂಧ ಕಳುಹಿಸಲು ಸೆ.30 ಅಂತಿಮದಿನವಾಗಿದೆ. ಸ್ಪರ್ಧೆಯನಿಯಮಗಳುಹಾಗೂಅರ್ಜಿನಮೂನೆಯನ್ನು ಅಧ್ಯಯನ ಕೇಂದ್ರದ ವೆಬ್‌ಸೈಟ್‌ನಿಂದ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಇ-ಮೇಲ್ ಅಥವಾ ಅಂಚೆ/ಕೊರಿಯರ್ ಮೂಲಕ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ಜಿಲ್ಲಾ ಸಂಚಾಲಕಿ ರೇಣುಕಾ ಕೋಡಗುಂಟಿ (ಮೊ: 80958 97118), ಪ್ರಾಧ್ಯಾಪಕ ಸೈಯದ್ ಮುಜೀಬ್ ಅಹ್ಮದ್ (ಮೊ: 9008990183) ಅಥವಾ ಅಧ್ಯಯನ ಕೇಂದ್ರದ 080-22113147 / 9060010002 ಸಂಖ್ಯೆಯನ್ನು ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ.

# ರಾಜ್ಯ ಮಟ್ಟದ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಅರ್ಜಿ ಆಹ್ವಾನ

ರಾಯಚೂರು ಸೆಪ್ಟಂಬರ್ 09 (ಕರ್ನಾಟಕ ವಾರ್ತೆ): ಪ್ರತಿ ವರ್ಷದಂತೆ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯದು ಪರಿಶಿಷ್ಟ ಪಂಗಡದ (ಎಸ್.ಟಿ) ಜನಾಂಗದ ಏಳಿಗೆಗಾಗಿ ಶ್ರಮಿಸಿದ ಪರಿಶಿಷ್ಟ ಪಂಗಡಕ್ಕೆ ಸೇರಿದ ಶೈಕ್ಷಣಿಕ, ಸಾಮಾಜಿಕ, ಸಾಹಿತ್ಯ ಹಾಗೂ ಇನ್ನಿತರೆ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ರಾಜ್ಯ ಮಟ್ಟದ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿ ನೀಡಿ ಗೌರವಿಸಲು ಸರ್ಕಾರದ ಆದೇಶದ ಮಾರ್ಗಸೂಚಿಯಂತೆ ಅರ್ಹ ವ್ಯಕ್ತಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಸರ್ಕಾರದ ಆದೇಶದಲ್ಲಿಯ ಮಾರ್ಗಸೂಚಿಯಂತೆ ಪರಿಶಿಷ್ಟ ವರ್ಗದವರ ಏಳಿಗೆಗಾಗಿ ಶ್ರಮಿಸಿದ ವ್ಯಕ್ತಿಗಳು ನಿಗಧಿತ ಅರ್ಜಿ ನಮೂನೆಯನ್ನು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕರಿಗಳು ರಾಯಚೂರು ಅಥವಾ ಆಯಾ ತಾಲೂಕಿನ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಗಳ ಕಚೇರಿಯಿಂದ ಪಡೆದು ತಮ್ಮ ಪೂರ್ಣ ವ್ಯಕ್ತಿ ಪರಿಚಯ, ಸಾಧನೆ ಹಾಗೂ 2 ಭಾವಚಿತ್ರಗಳೊಂದಿಗೆ ನಿಗಧಿತ ಅರ್ಜಿ ನಮೂನೆಯಲ್ಲಿ ಭರ್ತಿ ಮಾಡಿ ಸೆಪ್ಟಂಬರ್ 28ರೊಳಗಾಗಿ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕರಿಗಳು ರಾಯಚೂರು ಇವರ ಕಾರ್ಯಾಲಯ ಅಥವಾ ಆಯಾ ತಾಲೂಕಿನ ತಾಲೂಕ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಗಳ ಕಚೇರಿಗಳಿಗೆ ಸಲ್ಲಿಸಬಹುದಾಗಿದ ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಹಾಗೂ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣಾ ಸಮಿತಿಯ ಸದಸ್ಯ ಕಾರ್ಯದರ್ಶಿಗಳಾದ ಶಿವಮಾನಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಾನಗರ ಪಾಲಿಕೆಯಿಂದ ವೈಯಕ್ತಿಕ ಚಟುವಟಿಕೆಗೆ ಅರ್ಜಿ ಆಹ್ವಾನ

ರಾಯಚೂರು ಸೆಪ್ಟಂಬರ್ 09 (ಕರ್ನಾಟಕ ವಾರ್ತೆ): ರಾಯಚೂರು ಮಹಾನಗರ ಪಾಲಿಕೆ ಅನುದಾನದಲ್ಲಿ 2024-25ನೇ ಸಾಲಿನ 2025-26ನೇ ಸಾಲಿನ ಶೇಕಡಾ 24.10 ಯೋಜನೆಯ ಟಿ.ಎಸ್.ಪಿ ಕಲ್ಯಾಣ ಕಾರ್ಯಕ್ರಮಗಳಲ್ಲಿ ವೈಯಕ್ತಿಕ ಚಟುವಟಿಕೆಗಳಿಗೆ ಅರ್ಹ ಫಲಾನುಭವಿಗಳಿಂದ ಸೌಲಭ್ಯಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

2024-25ನೇ ಸಾಲಿನ ಮಹಾನಗರಪಾಲಿಕೆ ನಿಧಿ ವೈಯಕ್ತಿಕ ಚಟುವಟಿಕೆಗಳಡಡಿ ಪರಿಶಿಷ್ಟ ಪಂಗಡ ಜನಾಂಗದ ಎಂ.ಎ/ಎ.ಎಸ್.ಸಿ/ಎ.ಕಾ/ ಎಂ.ಎಸ್.ಡಬ್ಲ್ಯೂ/ ಎಂ.ಬಿ.ಎ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸಹಾಯಧನ ತಲಾ ರೂ.15000★3 ಹಾಗೂ 2025-26ನೇ ಸಾಲಿನ ಮಹಾನಗರಪಾಲಿಕೆ ನಿಧಿ ವೈಯಕ್ತಿಕ ಚಟುವಟಿಕೆಗಳಡಡಿ ಪರಿಶಿಷ್ಟ ಪಂಗಡ ಜನಾಂಗದ ಎಂ.ಎ/ಎ.ಎಸ್.ಸಿ/ಎ.ಕಾ/ಎ.ಎಸ್.ಡಬ್ಲ್ಯೂ/ ಎಂ.ಬಿ.ಎ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸಹಾಯಧನ ತಲಾ 15, 000 ರೂ.ಗಳನ್ನು 6 ಮಂದಿಗೆ ವಿತರಣೆ ಮಾಡಲಾಗುವುದು.

ದಾಖಲಾತಿಗಳು: ನಿಗದಿತ ನಮೂನೆಯಲ್ಲಿ ಅರ್ಜಿ, ಬಾವಚಿತ್ರ-1, ಹಿಂದಿನ ವರ್ಷದ ಅಂಕಪಟ್ಟಿ, ಅಧ್ಯಾಯನ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಜಾತಿ ಪ್ರಮಾಣ ಪತ್ರ, ಚಾಲ್ತಿಯಲ್ಲಿರುವ ಆದಾಯ ಪ್ರಮಾಣ ಪತ್ರ, ಪ್ರವೇಶ ರಶೀದಿ, ಬ್ಯಾಂಕ್ ಪಾಸ್ ಬುಕ್‌ನೊಂದಿಗೆ ದಾಖಲಾತಿಗಳು ಖಡ್ಡಾಯವಾಗಿ ನಿಗದಿತ ದಿನಾಂಕ ಒಳಗಡೆ ಸಲ್ಲಿಸಲು ಸೂಚಿಸಿದೆ. ಅವದಿ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಸರಿಯಾದ ದಾಖಲಾತಿಗಳನ್ನು ಸಲ್ಲಿಸದೆ ಇದ್ದ ಪಕ್ಷದಲ್ಲಿ ಯಾವುದೇ ಮುನ್ಸೂಚನೆ ನೀಡದೆ ತಿರಸ್ಕರಿಸಲಾಗುವುದು.

ಆಸಕ್ತರು ಸೆಪ್ಟೆಂಬರ್ 23ರ ಸಂಜೆ 5ಗಂಟೆಯ ಒಳಗಾಗಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಚೇರಿ ವೆಬ್‌ಸೈಟ್ ವಿಳಾಸ www.raichurcity.gov.in ನೋಟಿಫಿಕೇಶನಲ್ಲಿ ನೋಟ ಮಾಡಿ ಮತ್ತು ಕಚೇರಿ ನೋಟಿಸ್ ಬೋರ್ಡ ನೋಡಬಹುದಾಗಿದೆ ಎಂದು ರಾಯಚೂರ ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಈಚನಾಳ ಅಸ್ಪೃಶ್ಯತೆ ಆಚರಣೆ ಪ್ರಕರಣ ದಾಖಲು

ಲಿಂಗಸುಗೂರ: ತಾಲೂಕಿನ ಈಚನಾಳ ಗ್ರಾಮದಲ್ಲಿ ಹೋಟಲ್ ಯೊಂದರಲ್ಲಿ ಅಸ್ಪೃಶ್ಯತೆ ಆಚರಣೆ ಎಂದು ಗ್ರಾಮದ ಅಮರಪ್ಪ ನೀಡಿದ ದೂರಿನ ಅನ್ವಯ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ರವಿಂದ್ರ ಉಪ್ಪಾರ ಲಿಂಗಸುಗೂರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದರಿಂದ ಈಚನಾಳ ಗ್ರಾಮದ ಶಿವಪ್ಪ ತಂ ಶರಣಪ್ಪ ಹಡಪದ ವಿರುದ್ಧ ಪ್ರಕರಣ ದಾಖಲಿಸಿ ಪಿಎಸಐ ಗಂಗಪ್ಪ ಬುರ್ಲಿ ತನಿಖೆ ಕೈಗೊಂಡಿದ್ದಾರೆ.

ಸದರಿ ಪ್ರಕರಣದ ಕುರಿತು 3 ತಿಂಗಳ ಹಿಂದೆ ಆರೋಪಿತನ ಅಸ್ಪೃಶ್ಯತೆ ಆಚರಣೆ ಮಾಡಿರುವ ವಿಡಿಯೋ ಇದ್ದು ಅದರಲ್ಲಿ ಮಾದಿಗ ಜಾತಿಯ ಮರಿಯಪ್ಪ ಎಂಬವರಿಗೆ ಆರೋಪಿ ತನ್ನ ಹೋಟಲ್‌ನಲ್ಲಿ ಕುಡಿಯುವ ನೀರು ಎತ್ತಿ ಹಾಕುತ್ತಿರುವ ದೃಶ್ಯವಿದ್ದು ಆರೋಪಿತನ ವಿರುದ್ಧ ಪರಿಶಿಷ್ಠ ಜಾತಿ, ಮತ್ತು ಪರಿಶಿಷ್ಟ ವರ್ಗಗಳ ನಿಯಂತ್ರಣ ಕಾಯ್ದೆ ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K